

# ಬೆಳಗಾವಿ ವರದಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

Read,Share and Follow - www.belagavivaradi.com

Vol-04 | Issue: 258 | ₹ ಬೆಲೆ: 4 | Thursday, 07, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಪಶು ಆಹಾರ ಮಾರಾಟ ದರ ಕಡಿಮೆ ಮಾಡಲು ಪರಿಶೀಲನೆ: ಸಚಿವ ಕೆ.ವೆಂಕಟೇಶ



ಬೆಳಗಾವಿ ಸುವರ್ಣ ವಿಧಾನಸೌಧ: ಪಶು ಆಹಾರಕ್ಕೆ ಬಳಸುವ ಕಚ್ಚಾ ಪದಾರ್ಥಗಳ ದರ ಲಭ್ಯತೆ ಹಾಗೂ ಸಂಸ್ಥೆಯ ಆರ್ಥಿಕ ಪರಿಸ್ಥಿತಿಯನ್ನಾಧರಿಸಿ ಪಶು ಆಹಾರ ಮಾರಾಟ ದರವನ್ನು ಕಡಿಮೆ ಮಾಡಲು ಪರಿಶೀಲನೆ ಮಾಡಲಾಗುವುದು ಎಂದು ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವರಾದ ಕೆ.ವೆಂಕಟೇಶ ಅವರು ಹೇಳಿದರು.

ವಿಧಾನ ಪರಿಷತನಲ್ಲಿ ಡಿಸೆಂಬರ್ 6ರಂದು ನಡೆದ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಕೆ.ಹರೀಶ್ ಕುಮಾರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪಶು ಆಹಾರ ಮಾರಾಟ ದರವನ್ನು ಉದ್ದೇಶ ಪೂರ್ವಕವಾಗಿ ಹೆಚ್ಚಳ ಮಾಡಿರುವುದಿಲ್ಲ. ಆಹಾರ ಬೆಲೆ ಏರಿಕೆ ಕಾರಣ ದರ ಹೆಚ್ಚಳ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಸಾಮಾನ್ಯವಾಗಿ ಪ್ರತಿ ಲೀಟರ್ ಹಾಲು ಉತ್ಪಾದನೆಗೆ ಸರಾಸರಿ 250 ಗ್ರಾಂ ಪಶು ಆಹಾರವನ್ನು ಬಳಸಬೇಕಾಗುತ್ತದೆ.

ರಾಜ್ಯ ಸರ್ಕಾರವು ಹಾಲು ಉತ್ಪಾದಕರನ್ನು ಉತ್ತೇಜಿಸಲು 2023ರ ಅಕ್ಟೋಬರ್ ಮಾಹೆಯಿಂದ ಪ್ರತಿ ಲೀಟರ್ ಹಾಲು ಮಾರಾಟ ದರವನ್ನು ರೂ.3ಗಳಿಗೆ ಹೆಚ್ಚಿಸಿದ್ದು ಈ ಮೊತ್ತವನ್ನು ಉತ್ಪಾದಕರಿಗೆ ನೇರವಾಗಿ ಪಾವತಿಸಲು ಕ್ರಮವಿಡಲಾಗಿದೆ.

ರೈತರಿಗೆ ಮತ್ತಷ್ಟು ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಹಾಲು ಉತ್ಪಾದನೆಗೆ ನೀಡುವ ಪ್ರೋತ್ಸಾಹ ಧನವನ್ನು ಮತ್ತಷ್ಟು ಹೆಚ್ಚಿಸಲು ಕ್ರಮ ವಹಿಸುವುದಾಗಿ ಅವರು ಹೇಳಿದರು.

ಒಂದೂವರೆ ವರ್ಷದಲ್ಲಿ ಎರಡು ಬಾರಿಗೆ ಪಶು ಆಹಾರ ಮಾರಾಟ ದರ ಹೆಚ್ಚಿಗೆ ಮಾಡಿದ್ದರಿಂದ ಇದು ರೈತರಿಗೆ ಹೊರೆಯಾಗಿ ಪರಿಣಮಿಸುತ್ತಿದೆ ಎಂದು ಸದಸ್ಯರು ಪ್ರಶ್ನಿಸಿದರು. ಹಾಲಿಗೆ ಪ್ರೋತ್ಸಾಹ ಧನ ಹೆಚ್ಚಳ ಮಾಡಿದಲ್ಲಿ ರೈತರ ಹಿತದೃಷ್ಟಿಯಿಂದ ನಾವು ಬೆಂಬಲ ಕೊಡುವುದಾಗಿ ಸದಸ್ಯೆ ತೇಜಸ್ವಿನಿ ಅವರು ತಿಳಿಸಿದರು.

# ಉತ್ತರ ಕರ್ನಾಟಕದ ಸಮಸ್ಯೆಗಳು, ಬರಗಾಲ ಪರಿಸ್ಥಿತಿ ಬಗ್ಗೆ ಮುಕ್ತ ಚರ್ಚೆಗೆ ಸರಕಾರ ಸಿದ್ಧ; ವಿಪಕ್ಷಗಳು ಉತ್ತಮ ಸಲಹೆ, ಸಹಕಾರ ನೀಡಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ



ಸುವರ್ಣಸೌಧ, ಬೆಳಗಾವಿ : ರಾಜ್ಯ ಸರಕಾರವು ಉತ್ತರ ಕರ್ನಾಟಕದ ಸಮಸ್ಯೆಗಳನ್ನು ಮತ್ತು ಬರಗಾಲ ಪರಿಸ್ಥಿತಿ ಕುರಿತು ಮುಕ್ತವಾಗಿ ಚರ್ಚಿಸಲು ಸಿದ್ಧವಿದ್ದು, ವಿಪಕ್ಷಗಳು ಉತ್ತಮ ಸಲಹೆ, ಸಹಕಾರ ನೀಡಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಸಂಜೆ ವಿಧಾನಸಭೆಯ ಕಲಾಪದ ಶೂನ್ಯ ವೇಳೆಯಲ್ಲಿ ಮಾತನಾಡಿದರು. ಎರಡು ದಿನಗಳಿಂದ ಸರಕಾರವು ಉತ್ತರ ಕರ್ನಾಟಕ ಸಮಸ್ಯೆಗಳನ್ನು ಮತ್ತು ಬರಗಾಲ ಕುರಿತು ಚರ್ಚಿಸಲು ಕಾಯುತ್ತಿದೆ. ವಿಪಕ್ಷಗಳ ಸದಸ್ಯರು ಸಕ್ರಿಯವಾಗಿ ಭಾಗವಹಿಸಿ, ಸರಕಾರಕ್ಕೆ ಉತ್ತಮ ಸಲಹೆ, ಸಹಕಾರ ನೀಡಬೇಕು. ಸರ್ಕಾರ ವಿಪಕ್ಷಗಳ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಲಿದೆ. ಸಭೆ ಅರ್ಥಪೂರ್ಣವಾಗಿ ನಡೆಯಲು ಸಹಕಾರ ನೀಡಬೇಕೆಂದು ಮುಖ್ಯಮಂತ್ರಿಗಳು ಕೋರಿದರು.



## ವಿಧಾನಸಭೆಯಲ್ಲಿ 2 ವಿಧೇಯಕಗಳ ಮಂಡನೆ

ಬೆಳಗಾವಿ ಸುವರ್ಣ ಸೌಧ : ಬೆಳಗಾವಿ ಸುವರ್ಣಸೌಧದಲ್ಲಿ ಬುಧವಾರ ನಡೆದ ವಿಧಾನಸಭೆಯಲ್ಲಿ 2 ಪ್ರಮುಖ ವಿಧೇಯಕಗಳನ್ನು ಮಂಡಿಸಲಾಯಿತು.

2023ನೇ ಸಾಲಿನ ಕರ್ನಾಟಕ ಸರಕು ಸೇವೆಗಳ ತೆರಿಗೆ (ಎರಡನೇಯ ತಿದ್ದುಪಡಿ) ವಿಧೇಯಕವನ್ನು ಮತ್ತು 2023 ನೇ ಸಾಲಿನ ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ವಿಧೇಯಕವನ್ನು ಮುಖ್ಯಮಂತ್ರಿ ಹಾಗೂ ಗೃಹ ಸಚಿವರ ಪರವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಸದನದಲ್ಲಿ ಮಂಡಿಸಿದರು. ಈ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ.

## ಅನುದಾನ ಲಭ್ಯತೆ ಆಧರಿಸಿ ರಸ್ತೆ ಸುಧಾರಣೆಗೆ ಕ್ರಮ: ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ ಸುವರ್ಣ ವಿಧಾನಸೌಧ: ರಾಜ್ಯದ ಬೇರೆ ಬೇರೆ ಕಡೆಗಳಲ್ಲಿ ರಸ್ತೆ ಸುಧಾರಣೆ ಕಾರ್ಯವನ್ನು ಅನುದಾನ ಲಭ್ಯತೆ ಆಧರಿಸಿ ಮಾಡಲಾಗುವುದು ಎಂದು ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಹೇಳಿದರು.

ವಿಧಾನ ಪರಿಷತನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಕೇಳಿದ ಸದಸ್ಯರಾದ ಎಸ್.ವಿ.ಸಂಕನೂರ ಮತ್ತು ಎನ್ ರವಿಕುಮಾರ ಅವರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಆಯ್ದ ಭಾಗಗಳಲ್ಲಿ ಭಾಗಶಃ ಹಾನಿಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಖಾನಾಪುರದಿಂದ ನಂದಗಡ ಮುಖಾಂತರ ಹೋಗುವ ಹಳಿಯಾಳ ರಸ್ತೆಯ ಆಯ್ದ ಭಾಗಗಳಲ್ಲಿ ಆಗಿರುವ ಹಾನಿಗೆ 2023-24ನೇ ಸಾಲಿನ ರಾಜ್ಯ ಹೆದ್ದಾರಿ ವಾರ್ಷಿಕ ನಿರ್ವಹಣೆ ಆಡಿ ಬಿಡುಗಡೆಯಾದ ಅನುದಾನದಲ್ಲಿ 22 ಕಿಮಿ ರಸ್ತೆಯನ್ನು ಸರಿಪಡಿಸಲಾಗುತ್ತಿದೆ ಎಂದು ತಿಳಿಸಿದರು. ಗದಗ- ಲಕ್ಷ್ಮೇಶ್ವರ ಸವಣೂರ ರಸ್ತೆ ಸರಿಪಡಿಸಲು ಜಂಟಿ ಪರಿಶೀಲನೆ ನಡೆಸಿ ಕ್ರಮ ವಹಿಸುವುದಾಗಿ ಲೋಕೋಪಯೋಗಿ ಸಚಿವ ಜಾರಕಿಹೊಳಿ ಹೇಳಿದರು. ಕಾರವಾರ-ಇಳಕಲ್ ರಾಜ್ಯ ಹೆದ್ದಾರಿ 5ರ ಭಾಗವಾಗಿರುವ ಸವಣೂರ ರಸ್ತೆಯನ್ನು ಸಂಪೂರ್ಣವಾಗಿ ಸರಿಪಡಿಸಬೇಕು ಎನ್ನುವ ಎಸ್.ವಿ. ಸಂಕನೂರ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಗದಗ- ಲಕ್ಷ್ಮೇಶ್ವರ ಸವಣೂರ ರಸ್ತೆ ಸುಧಾರಣೆಯನ್ನು ಕೆಆರ್ಡಿಸಿಎಲ್, ಕೆಷಿಪ್ ಸೇರಿದಂತೆ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ನಿರ್ವಹಣೆ ಮಾಡಲಾಗಿದೆ. ರಸ್ತೆ ಸುಧಾರಣೆ ಹಿನ್ನೆಲೆಯಲ್ಲಿ ಸದಸ್ಯರೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಕ್ರಮ ವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

## ಕೊಬ್ಬರಿ ಪ್ರೋತ್ಸಾಹಧನ ಹೆಚ್ಚಳಕ್ಕೆ ಕ್ರಮ; ಕೇಂದ್ರ ಸರಕಾರ ನಫೇಡ್ ಮೂಲಕ ಎಂಎಸ್‌ಪಿ ಅಡಿ ಕೊಬ್ಬರಿ ಖರೀದಿ ಪ್ರಾರಂಭಿಸಲಿ: ಸಚಿವ ಶಿವಾನಂದ ಪಾಟೀಲ



ಸುವರ್ಣಸೌಧ ಬೆಳಗಾವಿ: ರಾಜ್ಯ ಸರಕಾರವು ತೆಂಗು ಬೆಳೆಗಾರರಿಗೆ ಸಹಾಯ ಮಾಡಲು, ಕೇಂದ್ರದ ಬೆಂಬಲ ಬೆಲೆ ಯೋಜನೆಯಡಿ ನೀಡುವ ದರದೊಂದಿಗೆ ಕೊಬ್ಬರಿ ಖರೀದಿಗೆ ಈಗಾಗಲೇ 1,225 ರೂ.ಗಳನ್ನು ಪ್ರೋತ್ಸಾಹಧನ ನೀಡುತ್ತಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರು ವಿಧಾನಸಭೆಯಲ್ಲಿ ತಿಳಿಸಿದರು.

ಶೂನ್ಯವೇಳೆಯಲ್ಲಿ ಶಾಸಕ ಶಿವಲಿಂಗೆಗೌಡ, ಎಚ್.ಡಿ.ರೇವಣ್ಣ ಸೇರಿದಂತೆ ವಿವಿಧ ಶಾಸಕರು ಕೊಬ್ಬರಿ ಖರೀದಿ ಬೆಲೆ ಬಹಳಷ್ಟು ಕಡಿಮೆ ಆಗಿರುವುದರಿಂದ ಸರಕಾರಗಳು ರೈತರ ನೆರವಿಗೆ ಬರಬೇಕೆಂದು ವಿಷಯ ಪ್ರಸ್ತಾಪಿಸಿದ್ದರಿಂದ ಅವರಿಗೆ ಉತ್ತರಿಸಿ, ಮಾತನಾಡಿದರು.

ನಫೇಡ್ ಸಂಸ್ಥೆ ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಕೊಬ್ಬರಿ ಖರೀದಿ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ರೈತರಿಗೆ ತೊಂದರೆ ಆಗಿದೆ. ಮರು ಆರಂಭಿಸಲು ಕೇಂದ್ರ ಸರಕಾರಕ್ಕೆ ಪತ್ರ ಬರೆಯಲಾಗಿದೆ. ರಾಜ್ಯ ಸರಕಾರ ಕೊಬ್ಬರಿ ಖರೀದಿಗೆ ನೀಡಿರುವ ಈಗೀರುವ ಪ್ರೋತ್ಸಾಹಧನ ರೂ.1225 ಗಳೊಂದಿಗೆ ರೂ.225 ಸೇರಿಸಿ ಒಟ್ಟು 1500 ರೂ.ಗಳನ್ನು ನೀಡುತ್ತದೆ. ಕೇಂದ್ರ ಆದಷ್ಟು ಬೇಗ ಖರೀದಿ ಪ್ರಾರಂಭಿಸಿದರೆ ರೈತರಿಗೆ ಒಳಿತಾಗುತ್ತದೆ ಎಂದು ತಿಳಿಸಿದರು.

## ವಸತಿ ಶಾಲೆ: ಸ್ಥಳೀಯ ವಿದ್ಯಾರ್ಥಿಗಳಿಗೆ ಶೇ.60ರಷ್ಟು ಸ್ಥಾನ ಮೀಸಲು: ಸಚಿವ ದಿನೇಶ್ ಗುಂಡೂರಾವ್



ಬೆಳಗಾವಿ: ಸುವರ್ಣವಿಧಾನಸೌಧ: ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕೆ ಸ್ಥಳೀಯ ಪ್ರದೇಶದಲ್ಲಿ ವಾಸಿಸುತ್ತಿರುವ, ಆಯಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಶೇ.60 ರಷ್ಟು ಸ್ಥಾನಗಳನ್ನು ಮೀಸಲಿರಿಸಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಬುಧವಾರ ವಿಧಾನಸಭಾ ಅಧಿವೇಶನದಲ್ಲಿ ಶಾಸಕ ಶಿವಲಿಂಗೇಗೌಡ.ಕೆ.ಎಂ ಅವರ ಚುಕ್ಕೇ ಗುರುತಿನ ಪ್ರಶ್ನೆಗೆ ಸಮಾಜ ಕಲ್ಯಾಣ ಇಲಾಖೆ ಸಚಿವರ ಪರವಾಗಿ ಅವರು ಉತ್ತರಿಸಿದರು. ವಸತಿ ಶಾಲೆಗಳ ಶೇ.60ರಷ್ಟು ಮೀಸಲಾತಿಯು 2024-25ನೇ ಸಾಲಿನಿಂದ ಅನುಷ್ಠಾನಕ್ಕೆ ಬರಲಿದೆ.

ಉಳಿದ ಶೇ.40 ರಷ್ಟು ಸ್ಥಾನಗಳನ್ನು ಅಂತರ್ ತಾಲ್ಲೂಕು, ಜಿಲ್ಲೆ, ಹಾಗೂ ರಾಜ್ಯದ ಮೂಲಕ ಭರ್ತಿ ಮಾಡಲಾಗುವುದು ಎಂದು ತಿಳಿಸಿದರು. ಶಾಸಕ ಶಿವಲಿಂಗೇಗೌಡ ಮಾತನಾಡಿ, ವಸತಿ ಶಾಲೆಗಳ ಪ್ರವೇಶಕ್ಕೆ ಪರೀಕ್ಷೆ ಅಂಕಗಳನ್ನು ಮಾತ್ರ ಪರಿಗಣಿಸಬೇಡಿ.

ಬಡತನ ರೇಖೆ ಹಾಗೂ ಓದಿಸಲು ಶಕ್ತರಿಲ್ಲದ ಪೋಷಕರ ಮಕ್ಕಳಿಗೆ ಅವಕಾಶ ನೀಡಬೇಕು. ಸ್ಥಳೀಯ ವಿದ್ಯಾರ್ಥಿಗಳಿಗೆ ಪ್ರವೇಶ ಮೀಸಲಾತಿಯನ್ನು ಶೇ.60 ರಿಂದ ಶೇ.75ಕ್ಕೆ ಹೆಚ್ಚಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

## ಅಧಿಕಾರಿಗಳು, ಸಿಬ್ಬಂದಿ ರಕ್ಷಣೆಗೆ ಸರ್ಕಾರ ಬದ್ಧ: ಎನ್.ಎಸ್.ಬೋಸರಾಜ



ಬೆಳಗಾವಿ ಸುವರ್ಣ ವಿಧಾನಸೌಧ: ಯಾವುದೇ ಸಂದರ್ಭದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ರಕ್ಷಣೆ ಕೊಡಲು ಸರ್ಕಾರ ಬದ್ಧವಾಗಿದೆ ಎಂದು ಸಚಿವರಾದ ಎನ್.ಎಸ್.ಬೋಸರಾಜು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 6ರಂದು ಶೂನ್ಯ ವೇಳೆಯಲ್ಲಿ ಮಾತನಾಡಿದ ಸದಸ್ಯರಾದ ಎಸ್.ವಿ.ಸಂಕನೂರ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಧಾರವಾಡ ಜಿಲ್ಲೆಯಲ್ಲಿ ಪಿಡಿಓ ಒಬ್ಬರು ಆರ್ಟಿ.ಐ ಕಾರ್ಯಕರ್ತರೊಬ್ಬರಿಂದ ತೀವ್ರ ತೊಂದರೆ ಎದುರಿಸಿ ವಿಷ ಸೇವನೆ ಮಾಡಿ ಆಸ್ಪತ್ರೆ ಸೇರುವಂತಹ ಪರಿಸ್ಥಿತಿ ಬಂದೊದಗಿದೆ.

ಈ ಪ್ರಕರಣದಲ್ಲಿ ತಪ್ಪಿತಸ್ಥ ಆರ್ಟಿಐ ಕಾರ್ಯಕರ್ತನ ಮೇಲೆ ಶಿಕ್ಷೆಯಾಗಿರುವುದಿಲ್ಲ. ಇಂತಹ ಕಿರುಕುಳ ಪ್ರಕರಣಗಳಿಂದ ಅಧಿಕಾರಿ ಸಿಬ್ಬಂದಿ ವರ್ಗದಲ್ಲಿ ದುಗುಡ ಮನೆ ಮಾಡಿದೆ ಎಂದು ಸಂಕನೂರ ಅವರು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಈ ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯಲಾಗಿದೆ. ಪಿಡಿಓ ನಾಗರಾಜ ಗಿಣಿವಾಲ ಅವರ ಆರೋಗ್ಯದ ಬಗ್ಗೆ ವಿಚಾರಣೆ ಮಾಡಲಾಗಿದೆ.

ಇಂತಹ ಪ್ರಕರಣಗಳು ಮರುಕಳಿಸದ ಹಾಗೆ ತಪ್ಪಿತಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸಚಿವರು ತಿಳಿಸಿದರು.

ಪರಿಶಿಷ್ಟ ಜಾತಿ, ಪಂಗಡ ಹಾಗೂ ಬಿಸಿಎಂ ವಸತಿ ನಿಲಯಗಳಲ್ಲಿ ಓದುವ 3 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಇದುವರೆಗೆ ಸಂಭ್ರಮ ಕಿಟ್ ನೀಡಿರುವುದಿಲ್ಲ ಎಂದು ಕೇಶವ್ ಪ್ರಸಾದ್ ಅವರು, ವಿಕಲಚೇತನರ ಶಾಲೆಯ ಶಿಕ್ಷಕರಿಗೆ ಭದ್ರತೆ ಇಲ್ಲದಂತಾಗಿದೆ.

ವಿಶೇಷಚೇತನರ ಶಾಲೆಗೆ ಮೂಲಭೂತ ಸೌಕರ್ಯದ ಕೊರತೆಯ ಕಾರಣ ಇಂತಹ ಶಾಲೆಗಳ ಶಿಕ್ಷಕರಾಗಲು ಹಿಂದೇಟು ಹಾಕುವಂತಹ ಸ್ಥಿತಿ ಎದುರಾಗಿದ್ದು ವಿಶೇಷಚೇತನ ಶಿಕ್ಷಕರ ಬೇಡಿಕೆಗೆ ಸ್ಪಂದಿಸಬೇಕು ಎಂದು ಹೇಮಲತಾ ನಾಯಕ ಅವರು, ಮೈಸೂರ ಜಿಲ್ಲೆಯಲ್ಲಿ ಮೈಸೂರ ಅಭಿವೃದ್ಧಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ ಹಣ ಕಟ್ಟಿದ್ದರೂ ಮಾಜಿ ಸೈನಿಕರು, ಸ್ವಾತಂತ್ರ್ಯ ಹೋರಾಟಗಾರರಿಗೆ ನಿವೇಶನಗಳನ್ನು ನೀಡುವಲ್ಲಿ ವಿಳಂಬವಾಗುತ್ತಿದೆ ಎಂದು ಮಂಜೇಗೌಡ ಅವರು, ಸೊಥ ಶಕ್ತಿ ಯೋಜನೆ ಜಾರಿ ಬಳಿಕ ಮಕ್ಕಳಿಗೆ ತೊಂದರೆಯಾಗುತ್ತಿದೆ. ಶೈಕ್ಷಣಿಕ ಪ್ರವಾಸಕ್ಕೆ ತೆರಳಲು ಬಸ್‌ಗಳ ಕೊರತೆಯಾಗಿದೆ ಎಂದು ಹರೀಶಕುಮಾರ ಅವರು, ಬೆಂಗಳೂರಿನ ಕಲಾಸಿಪಾಳ್ಯ ಮತ್ತು ಕೆ.ಆರ್.ಮಾರುಕಟ್ಟೆ ಬಳಿಯಲ್ಲಿ ಫುಟ್‌ಪಾತ್ ತೆರವುಗೊಳಿಸಿ ಬೆಂಗಳೂರಿನ ಘನತೆ ಉಳಿಸಬೇಕು ಎಂದು ಟಿ.ಎ.ಶರವಣ ಅವರು, ಬಳ್ಳಾರಿ ಜಿಲ್ಲೆಯ ಕುರಗೋಡ ವಸತಿ ಶಾಲೆಗೆ ಮೂಲಭೂತ ಸೌಕರ್ಯಗಳ ಕೊರತೆಯಾಗಿದೆ ಎಂದು ಸತೀಶ ಅವರು, ವಿದ್ಯಾರ್ಥಿಗಳು ಕಷ್ಟಪಟ್ಟು ಪರೀಕ್ಷೆ ಬರೆದರೂ ಲೋಕಸೇವಾ ಆಯೋಗವು ಆಯ್ಕೆಪಟ್ಟಿಯನ್ನು ಪ್ರಕಟಿಸಲು ವಿಳಂಬ ಮಾಡಿ ಅಭ್ಯರ್ಥಿಗಳಿಗೆ ತೊಂದರೆಯಾಗುತ್ತಿದೆ ಎಂದು ಸದಸ್ಯರಾದ ಶಶಿಲ್ ಜಿ ನಮೋಶಿ ಅವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದರು.

## ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗೆ ಪ್ರತ್ಯೇಕ ಎಂಜಿನಿಯರಿಂಗ್ ವಿಭಾಗ: ಸಚಿವ ಡಿ.ಸುಧಾಕರ್



ಬೆಳಗಾವಿ ಸುವರ್ಣ ಸೌಧ: ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ತ್ವರಿತ ಗತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಪ್ರತ್ಯೇಕ ಎಂಜಿನಿಯರಿಂಗ್ ವಿಭಾಗವನ್ನು ಆರಂಭಿಸುವ ಚಿಂತನೆ ಇದೆ ಎಂದು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ.ಸುಧಾಕರ್ ಹೇಳಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯ ಡಾ.ತಳವಾರ್ ಸಾಬಣ್ಣ ಅವರು ನಿಯಮ 72ರಡಿ ಕೋರಿದ್ದ ಗಮನ ಸೆಳೆಯುವ ಸೂಚನೆಗೆ ಪ್ರತಿಕ್ರಿಯಿಸಿದ ಸಚಿವರು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 2013-14 ನೇ ಸಾಲಿನಿಂದ 2022-23ನೇ ಸಾಲಿನವರೆಗೆ 11878.33 ಕೋಟಿ ರೂ ಅನುದಾನ ನಿಗಧಿಪಡಿಸಿದ್ದು, 10228.8 ಕೋಟಿ ರೂ ಅನುದಾನ ಮಂಡಳಿಗೆ ಬಿಡುಗಡೆ ಮಾಡಲಾಗಿದೆ. ಈ ಪೈಕಿ 8333.37 ಕೋಟಿ ರೂ ಅನುದಾನ ವೆಚ್ಚ ಮಾಡಲಾಗಿದೆ ಎಂದು ತಿಳಿಸಿದರು.

ಇದೇ ಅವಧಿಯಲ್ಲಿ 29,246 ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದು, 24,996 ಕಾಮಗಾರಿಗಳು ಪೂರ್ಣಗೊಂಡಿವೆ. 3186 ಕಾಮಗಾರಿಗಳು ಪ್ರಗತಿಯಲ್ಲಿದ್ದು, 1064 ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

2023-24ನೇ ಸಾಲಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕ್ರಿಯಾಯೋಜನೆ ರೂಪಿಸಲು ರಾಜ್ಯಪಾಲರು ಅನುಮೋದನೆ ನೀಡಿದ್ದು, ಮಂಡಳಿಯಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು ಶೀಘ್ರದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಎಂದು ಅವರು ತಿಳಿಸಿದರು.

ಮಂಡಳಿಯಿಂದ ಅನುಮೋದನೆಗೊಂಡ ಕಾಮಗಾರಿಗಳನ್ನು ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಕಾಮಗಾರಿಗಳನ್ನು 3ನೇ ತಪಾಸಣಾ ತಂಡದಿಂದ, ಇಂಜಿನಿಯರಿಂಗ್ ಕಾಲೇಜುಗಳಿಂದ, ಲೋಕೋಪಯೋಗಿ ಗುಣ ಭರವಸೆ ನಿಯಂತ್ರಣ ವಿಭಾಗ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಗುಣ ಭರವಸೆ ನಿಯಂತ್ರಣ ವಿಭಾಗ, ಸಣ್ಣ ನೀರಾವರಿ ಗುಣ ಭರವಸೆ ನಿಯಂತ್ರಣ ವಿಭಾಗ, ಇತ್ಯಾದಿ ಗುಣ ಭರವಸೆ ನಿಯಂತ್ರಣ ವಿಭಾಗಗಳಿಂದ ಪರಿಶೀಲಿಸಿ ದೃಢೀಕರಣ ಪಡೆಯಲಾಗುತ್ತಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರತಿ ವರ್ಷ 5000 ಕೋಟಿ ರೂ.ಅನುದಾನ ನೀಡುವ ಬಗ್ಗೆ ಈಗಾಗಲೇ ಘೋಷಣೆ ಮಾಡಿದ್ದು, ಈ ಅನುದಾನಕ್ಕೆ ಕ್ರಿಯಾಯೋಜನೆ ರೂಪಿಸಿ ತ್ವರಿತ ಗತಿಯಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಪ್ರತ್ಯೇಕ ಎಂಜಿನಿಯರಿಂಗ್ ವಿಭಾಗವನ್ನು ಆರಂಭಿಸುವ ಚಿಂತನೆ ಇದ್ದು, ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ವೆಚ್ಚ ಮಾಡಲಾಗುವುದು ಎಂದರು.

ಗಮನ ಸೆಳೆಯುವ ಈ ಸೂಚನೆಯಲ್ಲಿ ಸಚಿವ ಈಶ್ವರ ಖಂಡ್ರೆ, ವಿಧಾನ ಪರಿಷತ್ ಶಾಸಕರಾದ ತೇಜಸ್ವಿನಿ ಗೌಡ, ರಘುನಾಥ್‌ರಾವ್ ಮಲ್ಕಾಪುರೆ, ವೆಂಕಟೇಶ, ಬೋಜೇಗೌಡ, ತಿಪ್ಪಣ್ಣ, ರವಿಕುಮಾರ್, ಸತೀಶ್, ನಮೋಶಿ ಮತ್ತಿತರರು ಮಾತನಾಡಿದರು.

## 100 ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಚಿಂತನೆ: ಸಚಿವ ಶಿವರಾಜ್ ಎಸ್ ತಂಗಡಗಿ



ಬೆಳಗಾವಿ: ಸುವರ್ಣ ವಿಧಾನಸೌಧ: ರಾಜ್ಯದ ಎಲ್ಲಾ ಶಾಸಕರುಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಒತ್ತಡ ಕೇಳಿ ಬರುತ್ತಿದೆ.

ಈ ಹಿನ್ನಲೆಯಲ್ಲಿ ಸರ್ಕಾರದಿಂದ 100 ಹೊಸ ಹಿಂದುಳಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕೆ ಚಿಂತನೆ ನಡೆಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ಎಸ್ ತಂಗಡಗಿ ಹೇಳಿದರು.

ಬೆಳಗಾವಿಯಲ್ಲಿ ಜರುಗುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಬುಧವಾರದ ವಿಧಾನಸಭಾ ಪ್ರಶ್ನೋತರ ಕಲಾಪದ ವೇಳೆ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಉತ್ತರಿಸಿ ಅವರು ಮಾತನಾಡಿದರು.

ಬಳಹಷ್ಟು ವಿದ್ಯಾರ್ಥಿಗಳು ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಸಿಗದೆ ಹಾಗೆ ಉಳಿಯುತ್ತಾರೆ. ಹಾಗಾಗಿ ಈ ಬಾರಿ ವಿದ್ಯಾರ್ಥಿ ನಿಲಯಗಳ ಸಂಖ್ಯಾ ಬಲದ ಶೇ.25 ರಷ್ಟು ಹೆಚ್ಚು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ. ಪ್ರವೇಶ ಸಿಗದ ವಿದ್ಯಾರ್ಥಿಗಳಿಗೆ ಸರ್ಕಾರ ವಿದ್ಯಾಸಿರಿ ಯೋಜನೆಯನ್ನು ಜಾರಿ ಮಾಡಿದೆ.

ಪ್ರಸಕ್ತ ವರ್ಷದಲ್ಲಿ ರೂ.38 ಕೋಟಿಗಳನ್ನು ವಿದ್ಯಾಸಿರಿಯಡಿ ನೀಡಲಾಗಿದೆ ಎಂದರು.

ಉಡುಪಿ ಜಿಲ್ಲೆಯಲ್ಲಿ 18 ಮೆಟ್ರಿಕ್ ಪೂರ್ವ, 25 ಮೆಟ್ರಿಕ್ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಒಟ್ಟು 4684 ವಿದ್ಯಾರ್ಥಿಗಳಿಗೆ ಪ್ರವೇಕಾಶ ಕಲ್ಪಿಸಲಾಗಿದೆ.

ಜುಲೈ ತಿಂಗಳಿನಲ್ಲಿ ಉಡುಪಿ ತಾಲ್ಲೂಕಿನ ಶಿವಳ್ಳಿ ಗ್ರಾಮದಲ್ಲಿ 125 ಸಂಖ್ಯಾಬಲದ ಮೆಟ್ರಿಕ್ ನಂತರ ಬಾಲಕಿರ ವಿದ್ಯಾರ್ಥಿನಿಲಯ ಮಂಜೂರು ಮಾಡಲಾಗಿದೆ ಎಂದು ಕುಂದಾಪುರ ಶಾಸಕ ಕಿರಣ್ ಕುಮಾರ್ ಕೊಡ್ಗಿ ಅವರ ಪ್ರಶ್ನೆಗೆ ಸಚಿವ ಶಿವರಾಜ್ ಎಸ್ ತಂಗಡಗಿ ಉತ್ತರಿಸಿದರು.

ಶಾಸಕ ಹರೀಶ್.ಬಿ.ಪಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಶಿವರಾಜ್ ಎಸ್ ತಂಗಡಗಿ, ಹಿಂದುಳಿದ ವರ್ಗಗಳ ಇಲಾಖೆಯಿಂದ ಒಟ್ಟು 9 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಇದರಲ್ಲಿ 8 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡ ಹೊಂದಿವೆ. ಉಳಿದ ಒಂದು ವಿದ್ಯಾರ್ಥಿ ನಿಲಯಕ್ಕೂ ಸ್ವಂತ ಕಟ್ಟಡ ನಿರ್ಮಿಸಲಾಗುವುದು.

ಸದ್ಯ ಈ ವಿದ್ಯಾರ್ಥಿ ನಿಲಯಗಳಲ್ಲಿ ಒಟ್ಟು 745 ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ ಎಂದರು.

ಸರ್ಕಾರ ಮುಂದಿನ 30 ವರ್ಷಗಳ ಆಲೋಚನೆ ಇಟ್ಟುಕೊಂಡು ವಿದ್ಯಾರ್ಥಿ ನಿಲಯಗಳ ಯೋಜನೆ ರೂಪಿಸಬೇಕು.

ವಿದ್ಯಾರ್ಥಿಗಳಿಗೆ ತೊಂದರೆಯಾಗದ ಹಾಗೆ, ಶಾಲಾ ಕಾಲೇಜು ಆರಂಭವಾಗುವ ವೇಳೆ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಬೇಕು ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ಸಚಿವರಿಗೆ ಸೂಚಿಸಿದರು.

ಶಾಸಕ ಧೀರಜ್ ಮುನಿರಾಜು, ಪುಟ್ಟರಂಗಶೆಟ್ಟಿ, ಎಂ.ಚಂದ್ರಪ್ಪ ಮಾತನಾಡಿ ನಿಗಮ ಮಂಡಳಿಗೆ ಸರ್ಕಾರ ಅನುದಾನ ಬಿಡುಗಡೆ ಮಾಡಬೇಕು ಎಂದು ಕೋರಿದರು.

ಕಳೆದ ಸರ್ಕಾರದ ಅವಧಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ 10 ಹೊಸ ನಿಗಮಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

ಆದರೆ ಈ ನಿಗಮಗಳಿಗೆ ಅನುದಾನವನ್ನು ನೀಡಿರಲಿಲ್ಲ. ಮುಖ್ಯಮಂತ್ರಿಗಳೊಂದಿಗೆ ಈ ಕುರಿತು ಚರ್ಚಿಸಿದ್ದೇನೆ. ಮುಂದಿನ ವರ್ಷದಲ್ಲಿ ಈ ನಿಗಮಗಳಿಗೆ ಅನುದಾನ ಕಲ್ಪಿಸುವುದಾಗಿ ಸಚಿವರು ಭರವಸೆ ನೀಡಿದರು.

## ಡಾ.ಬಿ.ಆರ್.ಅಂಬೇಡ್ಕರ್ ಮಹಾಪರಿನಿಬ್ಬಾಣ ದಿನ: ಅಂಬೇಡ್ಕರ್ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾಲಾರ್ಪಣೆ



ಸುವರ್ಣಸೌಧ: ಬೆಳಗಾವಿ: ಭಾರತರತ್ನ,ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾಪರಿನಿಬ್ಬಾಣ ದಿನದ ಅಂಗವಾಗಿ ಸುವರ್ಣ ಸೌಧಧ ಮುಂಭಾಗದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಸಚಿವರಾದ ಎಚ್.ಸಿ.ಮಹಾದೇವಪ್ಪ, ಆರ್ಬಿ. ತಿಮ್ಮಾಪುರ, ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೇರಿದಂತೆ ಅನೇಕ ಶಾಸಕರು ,ಗಣ್ಯರು ಹಾಗೂ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

# ಎಸ್ಸಿ ಎಸ್ಟಿ ವಿದ್ಯಾರ್ಥಿಗಳಿಗೂ ವಿದ್ಯಾಸಿರಿ ಜಾರಿಗೆ ಶಿಫಾರಸ್ಸು: ಪಿ.ಎಂ.ನರೇಂದ್ರಸ್ವಾಮಿ

ಬೆಳಗಾವಿ ಸುವರ್ಣ ವಿಧಾನಸೌಧ: ಬೆಳಗಾವಿಯ ಸುವರ್ಣವಿಧಾನಸೌಧದಲ್ಲಿ ನಡೆದ ಹದಿನಾರನೇ ವಿಧಾನಸಭೆಯಲ್ಲಿ ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2023–24ನೇ ಸಾಲಿನ ಮೊದಲನೇ ಹಾಗೂ ಮಧ್ಯಂತರ ವರದಿಯನ್ನು ಒಪ್ಪಿಸಲಾಗಿದೆ ಎಂದು ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಆಗಿರುವ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ ಅವರು ಹೇಳಿದರು.

ಡಿಸೆಂಬರ್ 6ರಂದು ಬೆಳಗಾವಿಯ ಸುವರ್ಣಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ನರ್ಸ/ಮಹಿಳಾ ಹೋಮ್ ಗಾರ್ಡ ನೇಮಕ ಮಾಡಿಕೊಳ್ಳಲು, ಕೇಂದ್ರ ಸರ್ಕಾರದ ವಿದ್ಯಾರ್ಥಿ ವೇತನದ ಪಾಲನ್ನು ನೇರವಾಗಿ ಶಿಕ್ಷಣ ಸಂಸ್ಥೆಗಳಿಗೆ ನೀಡಲು, ವಿದ್ಯಾಸಿರಿ ಯೋಜನೆಯನ್ನು ಪರಿಶಿಷ್ಟ ಜಾತಿ ಹಾಗೂ ಪಂಗಡದ ಸಮುದಾಯಕ್ಕೆ ಸಹ ಜಾರಿ ತರಲು, ಅತಿಥಿ ಶಿಕ್ಷಕರನ್ನು ಪಡೆಯುವಾಗ ಮೀಸಲಾತಿ ಕಲ್ಪಿಸುವುದು, ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿದ್ದಲ್ಲಿ ಕ್ರಮ ಕೈಗೊಳ್ಳಲು ಪ್ರತ್ಯೇಕ ಕಾಯಿದೆ ರೂಪಿಸಲು, ಹೊರಗುತ್ತಿಗೆಯಲ್ಲಿ ಮೀಸಲು ನೀಡಲು ಹೊಸ ಕಾಯಿದೆ ರೂಪಿಸುವುದು, ಶಿಕ್ಷಣ ಮತ್ತು ಹಾಸ್ಟೇಲಗಳಿಗೆ ಮೂಲಭೂತ ಸೌಕರ್ಯ ಕೊರತೆಯನ್ನು ಸರಿಪಡಿಸುವುದು, ಸ್ಥಳೀಯ ಸಂಸ್ಥೆಗಳ 24.1 ಅನುದಾನದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮತ್ತು ವಿಶ್ವ ವಿದ್ಯಾನಿಲಯಗಳ ಹಾಸ್ಟೇಲ್‌ಗಳಿಗೆ ಮೂಲಭೂತ ಸೌಕರ್ಯ ಒದಗಿಸುವುದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ವಾರಕ್ಕೆ 5 ಮೊಟ್ಟೆ ಕೊಡುವುದು, ಹಲವಾರು ಇಲಾಖೆಗಳಲ್ಲಿ ಸಿ ಅಂಡ್ ಆರ್ ನಿಯಮಗಳು, ರೋಸ್ಟರ್ ಮತ್ತು ಜೇಷ್ಠತಾ ಪಟ್ಟಿಗಳನ್ನು ಮಾಡಿಕೊಳ್ಳದಿರುವುದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಡಾ.ನಂಜುಂಡಪ್ಪ ವರದಿಯನ್ನು ಪ್ರಸ್ತುತ ಕಾಲಘಟ್ಟದ ಆಧಾರದ ಮೇಲೆ ಅಭಿವೃದ್ಧಿಪಡಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಮಿತಿಯು ವರದಿಯಲ್ಲಿ ಶಿಫಾರಸ್ಸು ಮಾಡಿದೆ ಎಂದು ಅವರು ತಿಳಿಸಿದರು.



ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಗಳಡಿ ವಿವಿಧ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನದ ಸದ್ಬಳಕೆ ಹಾಗೂ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿರುವ ಕುರಿತು ಸಮಿತಿಯು ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿಯನ್ನು ಮಂಡಿಸಲಾಗುತ್ತಿದೆ ಎಂದು ತಿಳಿಸಿದ ಅವರು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಮಿತಿಯಿಂದ ವಿವಿಧ ಇಲಾಖೆಗಳಲ್ಲಿ ಅಧ್ಯಯನ ನಡೆಸಲಾಗಿದೆ. ಈ ಯೋಜನೆಯಡಿ ಬಿಡುಗಡೆ ಮಾಡಲಾದ ಅನುದಾನಥ ಸಮರ್ಪಕವಾಗಿ ಬಳಕೆ ಆಗದೇ ಇರುವುದರ ಬಗ್ಗೆ ಕ್ರಮ ಕೈಗೊಳ್ಳದಿರುವುದು ಸಹ ಕಂಡು ಬಂದಿದೆ ಎಂದರು.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯಡಿ ಹಣ ದುರ್ಬಳಕೆ ಮಾಡಿಕೊಳ್ಳುತ್ತಿರುವ ವಿವಿಧ ನಿಗಮ ಮಂಡಳಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳ ವಿರುದ್ಧ ಹೊರಗುತ್ತಿಗೆಯಿಂದ ಭರ್ತಿ ಮಾಡುತ್ತಿದ್ದು ಮೀಸಲಾತಿ ಪಾಲಿಸದಿರುವ ಕುರಿತು ಸಹ ಶಿಫಾರಸ್ಸು ಮಾಡಲಾಗಿದೆ. ಪಂಚಾಯತ್ ಸದಸ್ಯರುಗಳಿಗೆ ಜಿಲ್ಲಾವಾರು ತರಬೇತಿ ನೀಡುವುದು, ಜೆಜೆಎಂ ಯೋಜನೆಯಡಿ ಎಸ್ಸಿಪಿ ಟಿಎಸ್ಪಿ ಅನುದಾನ ಬಳಸುತ್ತಿರುವುದು, ಎಲ್ಲಾ ಒಡೆತನ ಯೋಜನೆಯಡಿ ಎಸ್ಸಿ ಎಸ್ಟಿ ಸಮುದಾಯಕ್ಕೆ ಭೂಮಿಯನ್ನು ನೀಡಲು ಅನುದಾನ ಕೊರತೆ ಇರುವುದು, ಎಲ್ಲಾ ನಿಗಮ ಮಂಡಳಿಗಳಲ್ಲಿರುವ ಯೋಜನೆಗಳನ್ನು ಇಂದಿನ ಕಾಲಘಟ್ಟಕ್ಕೆ ಹೊಸ ಯೋಜನೆಗಳ ರೂಪುರೇಷಗಳು, ಎನ್‌ಎಸ್‌ಐಸಿ ಮಾದರಿ ರಾಜ್ಯದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಗುತ್ತಿಗೆದಾರರಿಗೆ ಇಎಂಡಿ ವಿನಾಯಿತಿ ನೀಡುವ ಕುರಿತಿ ಕಾಯ್ದೆ ತಿದ್ದುಪಡಿ, ಎಲ್ಲಾ ನಿಗಮ ಮಂಡಳಿಗಳಲ್ಲಿರುವ ಹಳೆಯ ಯೋಜನೆಗಳನ್ನು ಇಂದಿನ ಕಾಲಘಟಕ್ಕೆ ತಕ್ಕಂತೆ ಹೊಸ ರೂಪು ರೇಷೆಗಳನ್ನು ಸಿದ್ಧಪಡಿಸಲು ತಿಳಿಸಲಾಗಿದೆ. ಕಳೆದ 5 ವರ್ಷಗಳಲ್ಲಿ 92 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವ ಕುರಿತು ಸಂಪೂರ್ಣ ತನಿಖೆ ಕೈಗೊಳ್ಳಲು ಸಹ ವರದಿಯಲ್ಲಿ ಶಿಫಾರಸ್ಸು ಮಾಡಲಾಗಿದೆ ಎಂದು ಅವರು ತಿಳಿಸಿದರು.

ಶಿಕ್ಷಣ ಮತ್ತು ಹಾಸ್ಟೇಲಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ, ವಿವಿಧ ಇಲಾಖೆಗಳಲ್ಲಿ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಬಳಕೆ ಮಾಡದಿರುವುದು, ಇಂಧನ ಇಲಾಖೆಗೆ ಎಸ್‌ಸಿಎಸ್‌ಪಿ ಟಿಎಸ್ಪಿ ಹೆಚ್ಚುವರಿ ಅನುದಾನ 1.566 ಕೋಟಿಯನ್ನು ಸಮಾಜ ಕಲ್ಯಾಣ/ ಶಿಕ್ಷಣ ಇಲಾಖೆಗೆ ನೀಡಲು, ಹಾಸ್ಟೇಲ್ ವಸತಿ ಶಾಲೆಗಳ ಕಟ್ಟಡಗಳ ನಿರ್ಮಾಣಕ್ಕೆ ಅನುದಾನದ ಕೊರತೆ, ಅಧಿನಿಯಮದ ಪ್ರಕರಣ 7 (ಡಿ) ಇಂದಾಗಿ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಈ ಸಮುದಾಯಕ್ಕೆ ತಲುಪದಿರುವುದು, 7(ಬಿ) 7 (ಸಿ) ಗಳಿಗೆ ಸೂಕ್ತ ನಿಯಮ ರೂಪಿಸುವುದು, ಸೆಕ್ಷನ್ 24 ಪ್ರಕಾರ ಎಸ್‌ಸಿಎಸ್‌ಪಿ ಟಿಎಸ್ಪಿ ಅನುದಾನ ಬಳಕೆ ಮಾಡದಿರುವವರ ವಿರುದ್ಧ ಕ್ರಮ ವಹಿಸುವುದು, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿಶೇಷ ಯೋಜನೆಯಡಿ ಆಧುನಿಕ ಶಿಕ್ಷಣದ ಜೊತೆಗೆ ಶಿಕ್ಷಣ ಮತ್ತು ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಈ ಯೋಜನೆಯಡಿ ಬಳಕೆ ಆಗದೇ ಇರುವ ಅನುದಾವನ್ನು ಬಳಸಿಕೊಳ್ಳಲು ಸಮಿತಿಯು ಶಿಫಾರಸ್ಸು ಮಾಡಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ., ವಿಧಾನ ಪರಿಷತ್ ಸದಸ್ಯರಾದ ಅರವಿಂದಕುಮಾರ ಅರಳಿ ಹಾಗೂ ಶಾಂತಾರಾಮ ಬುಡ್ನಸಿದ್ದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಲಿಡ್ಕರ್ ಗೆ ನಟ ಡಾಲಿ ಧನಂಜಯ್ ರಾಯಭಾರಿ: ಸಿಎಂ ಅಧಿಕೃತ ಘೋಷಣೆ

ಬೆಂಗಳೂರು: ಡಾ.ಬಿ. ಆರ್. ಅಂಬೇಡ್ಕರ್ ಅವರ ಪುಣ್ಯ ಸ್ಮರಣೆಯಂದು ಲಿಡ್ಕರ್ ಉತ್ಪನ್ನಗಳಿಗೆ ನಟ ಡಾಲಿ ಧನಂಜಯ್ ರಾಯಭಾರಿ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಘೋಷಣೆ ಮಾಡಿದರು.

ಬೆಂಗಳೂರಿನ ವಿಧಾನಸೌಧದ ಮುಂದೆ ನಡೆದ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ಲಿಡ್ಕರ್ ಉತ್ಪನ್ನಕ್ಕೆ ಡಾಲಿ ರಾಯಭಾರಿಯಾಗಿದ್ದಾರೆ. ಈ ವೇಳೆ ಸಿಎಂ ಸಿದ್ದರಾಮಯ್ಯ, ಸಚಿವರಾದ ಹೆಚ್ ಸಿ ಮಹದೇವಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್ಕರ್)ಕ್ಕೆ ಇದೇ ಮೊದಲ ಬಾರಿಗೆ ರಾಯಭಾರಿಯನ್ನ ಆಯ್ಕೆ ಮಾಡಿದೆ. ನಟರಾಕ್ಷಸ ಡಾಲಿ ಧನಂಜಯ್ ಲಿಡ್ಕರ್ ಗೆ ರಾಯಭಾರಿ ಆಗಿದ್ದಾರೆ.



ಸ್ಯಾಂಡಲ್‌ವುಡ್ ನಟ, ನಿರ್ಮಾಪಕನಾಗಿ ಡಾಲಿ ಸಿಕ್ಕಾಪಟ್ಟೆ ಬ್ಯುಸಿ ಇರುವ ಸ್ಟಾರ್. ನಟನೆ, ನಿರ್ಮಾಣದ ಜೊತೆಗೀಗ ಧನಂಜಯ ಜಾಹೀರಾತು ಕ್ಷೇತ್ರಕ್ಕೂ ಕಾಲಿಟ್ಟಿದ್ದಾರೆ. ಮೊದಲ ಬಾರಿಗೆ ಡಾಲಿ ಸರ್ಕಾರದ ಜಾಹೀರಾತಿನಲ್ಲಿ ಮಿಂಚುವ ಮೂಲಕ ಲಿಡ್ಕರ್ ಬ್ರಾಂಡ್ ಪ್ರಮೋಟ್ ಮಾಡಲಿದ್ದಾರೆ.

ಲಿಡ್ಕರ್ ನಲ್ಲಿ 50ಸಾವಿರಕ್ಕೂ ಹೆಚ್ಚು ಚರ್ಮ ಕುಶಲಕರ್ಮಿಗಳ ಕುಟುಂಬವಿದೆ. ಚರ್ಮ ಕೈಗಾರಿಕೆಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲು ಮುಂದಾಗಿರುವ ಸರ್ಕಾರ ಸ್ಯಾಂಡಲ್‌ವುಡ್ ಸ್ಟಾರ್ ಧನಂಜಯ್ ಅವರನ್ನು ರಾಯಾಭಾರಿಯಾಗಿ ನೇಮಕಮಾಡಿದೆ. ಈಗಾಗಲೇ ಡಾಲಿ ಜೊತೆ ಮಾತುಕತೆಯಾಗಿದ್ದು ಧನಂಜಯ ಕೂಡ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಅಧಿಕೃತ ಪ್ರಕಟಣೆಯೊಂದೆ ಬಾಕಿ ಇತ್ತು, ಅದು ಈಡೇರಲಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಲಿಡ್ಕರ್ ವ್ಯವಸ್ಥಾಪಕ ನಿರ್ದೇಶಕಿ ಕೆ.ಎಂ.ಎಸ್ ವಸುಂಧರಾ, ಧನಂಜಯ್ ಅವರು ರಾಯಭಾರಿಯಾಗಿದ್ದು ತುಂಬಾ ಖುಷಿ ಇದೆ. ಅವರು ಸ್ಯಾಂಡಲ್‌ವುಡ್‌ನ ಲೀಡಿಂಗ್ ನಟ ಎಲ್ಲಾ ವರ್ಗದ ಜನರಿಗೆ ತಲುಪುವ ಕಲಾವಿದ ಹಾಗಾಗಿ ಅವರನ್ನ ಆಯ್ಕೆ ಮಾಡಿದ್ದೇವೆ ಸಚಿವರು ಕೂಡ ಇದಕ್ಕೆ ಒಪ್ಪಿಗೆ ಸೂಚಿಸಿದ್ದು ಆದಷ್ಟು ಬೇಗ ಜಾಹೀರಾತಿನ ಚಿತ್ರೀಕರಣ ನಡೆಯಲಿದೆ ಎಂದಿದ್ದಾರೆ

ಧನಂಜಯ ಸದ್ಯ ಸಾಲು ಸಾಲು ಸಿನಿಮಾಗಲ್ಲಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗಷ್ಟೆ ಧನಂಜಯ್ ತಮ್ಮದೇ ಡಾಲಿ ಸಂಸ್ಥೆ ನಿರ್ಮಾಣದ 'ಟಗರು ಪಲ್ಯ' ಸಿನಿಮಾ ರಿಲೀಸ್ ಮಾಡಿದ್ದರು. ಟಗರು ಪಲ್ಯ ಸಿನಿಮಾಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ನಿರ್ಮಾಣದ ಜೊತೆಗೆ ಡಾಲಿ ಅನೇಕ ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಕನ್ನಡದ ಜೊತೆಗೆ ತೆಲುಗಿನ ಪುಷ್ಪ–2 ಸಿನಿಮಾದಲ್ಲೂ ಕಾಣಿಸಿಕೊಂಡಿದ್ದಾರೆ ಈ ನಡುವೆ ಜಾಹೀರಾತು ಲೋಕಕ್ಕೆ ಡಾಲಿ ಲಗ್ಗೆ ಇಟ್ಟಿರುವುದು ಅವರ ಅಭಿಮಾನಿ ಬಳಗಕ್ಕೆ ಸಂತಸ ತಂದಿದೆ.

# ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ್ ಓದು ಕಾರ್ಯಕ್ರಮ–2023

## ಯುವ ಪೀಳಿಗೆ ಸಂವಿಧಾನದ ಆಶೋತ್ತರ ಅಳವಡಿಸಿಕೊಂಡರೆ ದೇಶದ ಅಭಿವೃದ್ಧಿ ಸಾಧ್ಯ: ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್



ಬೆಳಗಾವಿ: ಭಾರತದ ನಾಗರಿಕರಾದ ನಾವುಗಳು ಸಾರ್ವಭೌಮ, ಸಮಾಜವಾದಿ ಜಾತ್ಯಾತೀತ ಸೇರಿದಂತೆ ಸಂವಿಧಾನದ ಎಲ್ಲ ಆಶೋತ್ತರಗಳನ್ನು ಯುವ ಪೀಳಿಗೆ ನಿತ್ಯ ಜೀವನದಲ್ಲಿ ಅಳಡಿಸಿಕೊಂಡು ನಡೆದರೆ ದೇಶದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದು ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಸುವರ್ಣ ಸೌಧದ ಅಡಿಟೋರಿಯಂ ಸಭಾಂಗಣದಲ್ಲಿ ಬುಧವಾರ (ಡಿ.06) ರಂದು ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ್ ಅವರ 67ನೇಯ ಮಹಾಪರಿನಿರ್ವಾಣ ದಿನದ ಅಂಗವಾಗಿ ಏರ್ಪಡಿಸಲಾಗಿದ್ದ ಡಾ. ಬಿ.ಆರ್ ಅಂಬೇಡ್ಕರವರ ಓದು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಗ್ರಾಮೀಣ ಪ್ರದೇಶಗಳಲ್ಲಿ ಹೆಣ್ಣು ಮಕ್ಕಳಿಗೆ ಉನ್ನತ ಶಿಕ್ಷಣ , ಬಾಲ್ಯ ವಿವಾಹ ಹಾಗೂ ಅಪೌಷ್ಠಿಕತೆ ಸೆರಿಂದಂತೆ ವಿವಿಧ ರೀತಿಯ ತಾರತಮ್ಯಗಳು ರೂಢಿಯಲ್ಲಿವೆ.

ಇದು ನಿವಾರಣೆಯಾಗುವ ನಿಟ್ಟಿನಲ್ಲಿ ಎಲ್ಲರೂ ಶ್ರಮವಹಿಸಬೇಕಿದೆ ಎಂದು ಹೇಳಿದರು.

ಇವತ್ತಿನ ಯುವ ಪೀಳಿಗೆ ಶಿಕ್ಷಣದ ಜೊತೆಗೆ ಕ್ರೀಡೆ, ಕಲೆ, ಸಂಗೀತ, ಸಾಹಿತ್ಯ, ಹೀಗೇ ವಿವಿಧ ಕೌಶಲ್ಯ ಗಳಲ್ಲಿ ಆಸಕ್ತಿ ಇಟ್ಟು ತಮ್ಮದೇ ಆದ ಆಯ್ಕೆಗಳನ್ನು ತಗೆದುಕೊಂಡು ಸಾಧನೆ ಮಾಡುವುದರ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಹೇಳಿದರು.

ಓದು ಕಾರ್ಯಕ್ರಮದ ನಿಮಿತ್ಯ ವಿವಿಧ ಸ್ಪರ್ಧೆಗಳಲ್ಲಿ ಭಾಗಿಯದ ಶಾಲಾ ಕಾಲೇಜು ಮಕ್ಕಳಿಗೆ ಶಾಲಿನಿ ರಜನೀಶ್ ಅವರು ಪ್ರಮಾಣ ಪತ್ರ ವಿತರಣೆ ಮಾಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ರಾಜಶ್ರೀ ಜೈನಾಪೂರ, ಸೇರಿದಂತೆ ವಿವಿಧ ಶಾಲಾ ಕಾಲೇಜು ಮಕ್ಕಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬೆಳೆವಿಮೆ ಪರಿಹಾರ ವಿತರಣೆ ಅವ್ಯವಹಾರ: ಶಾಸಕ ಟಿ.ರಘುಮೂರ್ತಿ ಪ್ರಶ್ನೆ

ಬೆಳಗಾವಿ ಸುವರ್ಣ ಸೌಧ : ಚಳ್ಳಕೆರೆ ತಾಲ್ಲೂಕಿನಲ್ಲಿ ಬೆಳೆವಿಮೆ ಪರಿಹಾರ ವಿತರಣೆಯಲ್ಲಿ ಉಂಟಾದ ಅವ್ಯವಹಾರದ ಬಗ್ಗೆ ಶಾಸಕ ಟಿ.ರಘುಮೂರ್ತಿ ಅವರು ಬೆಳಗಾವಿಯ ಚಳಿಗಾಲದ ವಿಧಾನಸಭಾ ಅಧಿವೇಶನದಲ್ಲಿ ಕೃಷಿ ಸಚಿವರನ್ನು ಪ್ರಶ್ನಿಸಿದ್ದಾರೆ.

ಬುಧವಾರ ಶಾಸಕರ 175ನೇ ಚುಕ್ಕೇ ಗುರುತಲ್ಲದ ಪ್ರಶ್ನೆಗೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಲಿಖಿತವಾಗಿ ಉತ್ತರ ನೀಡಿದ್ದಾರೆ.

ಚಳ್ಳಕೆರೆ ತಾಲ್ಲೂಕಿನ ಪಿ.ಮಹಾದೇವಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2022–23ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ನೋಂದಾಯಿತ ಖಾತೆದಾರರಿಗೆ ಬೆಳೆ ವಿಮೆ ಪರಿಹಾರ ನೀಡುವಲ್ಲಿ ವ್ಯತ್ಯಾಸವಾಗಿರುವ ಬಗ್ಗೆ ರೈತರು ದೂರು ನೀಡಿದ್ದಾರೆ.



ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಚಳ್ಳಕೆರೆ ತಾಲ್ಲೂಕಿನಲ್ಲಿ 68717 ಹೆಕ್ಟೇರ್ ಪ್ರದೇಶದ 14 ವಿವಿಧ ಅಧಿಸೂಚಿತ ಬೆಳೆಗೆ ಒಟ್ಟು 44852 ಬೆಳೆವಿಮೆ ನೊಂದಣಿ ಪ್ರಸ್ತಾವನೆಗಳು ನೋಂದಣಿಯಾಗಿವೆ.

ಇದಲ್ಲದೆ ತಾಲ್ಲೂಕಿನ ಬೀಳು ಭೂಮಿ ಹಾಗೂ ನೋಂದಾಯಿತ ಬೆಳೆಯಲ್ಲದ ಬೇರೆ ಬೆಳೆಗಳಿಗೆ 80 ಪ್ರಕರಣಗಳಲ್ಲಿ ರೂ.67 ಲಕ್ಷೂ ಹೆಚ್ಚೂ ಬೆಳೆವಿಮೆ ಹಣ ದುರುಪಯೋಗವಾಗಿದೆ.

ಮೂಲ ಖಾತೆದಾರರ ಬದಲಿಗೆ ಬೇರೆಯೊಬ್ಬರನ್ನು ನೋಂದಣಿ ಮಾಡಿಸಿದ 2 ಪ್ರಕರಣಗಳಲ್ಲಿ ರೂ.1.90 ಲಕ್ಷ ಬೆಳೆ ವಿಮೆಹಣ ಪಡೆದ ವಂಚಿಸಲಾಗಿದೆ ಈ ಕುರಿತು ಜಿಲ್ಲಾಧಿಕಾರಿ ತನಿಖಾ ವರದಿ ನೀಡಿದ್ದಾರೆ ಎಂದು ಕೃಷಿ ಸಚಿವರು ತಿಳಿಸಿದ್ದಾರೆ.

# ಕಂದಾಯ ಗ್ರಾಮ ಪರಿವರ್ತನೆಗೆ ಕ್ರಮ: ಸಚಿವ ಕೃಷ್ಣ ಭೈರೇಗೌಡ

ಬೆಳಗಾವಿ ಸುವರ್ಣ ವಿಧಾನಸೌಧ: ರಾಜ್ಯದ ವಿವಿಧೆಡೆ ಇರುವ ಲಂಬಾಣಿ ತಾಂಡಾ, ಗೊಲ್ಲರಹಟ್ಟಿ, ವಡ್ಡರಹಟ್ಟಿ, ಕುರುಬರಹಟ್ಟಿ, ನಾಯಕರಹಟ್ಟಿ, ಮಜರೆಗ್ರಾಮ, ಹಾಡಿ, ದೊಡ್ಡಿ, ಪಾಳ್ಯ, ಕ್ಯಾಂಪ್, ಕಾಲೋನಿ ಮತ್ತು ಇತರೆ ದಾಖಲೆ ದಾಖಲೆ ರಹಿತ ಜನವಸತಿ ಪ್ರದೇಶಗಳು, ಕಂದಾಯ ಗ್ರಾಮ ಪಟ್ಟಿಯಿಂದ ಬಿಟ್ಟು ಹೋಗಿವೆ. ಅಂತಹುಗಳನ್ನು ಪರಿಶೀಲಿಸಿ ಕಂದಾಯ ಗ್ರಾಮವನ್ನಾಗಿ ಮಾಡಲು ಕ್ರಮ ವಹಿಸಲಾಗುವುದು ಎಂದು ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಹೇಳಿದರು.

ದುರ್ಬಲ ಮತ್ತು ಹಿಂದುಳಿದ ಸಮುದಾಯದ ಜನರು ವಾಸಿಸುವ ಪ್ರದೇಶಗಳು ಕಂದಾಯ ಗ್ರಾಮಗಳಾಗದೇ ಹಾಗೆ ಉಳಿದು ತೀರಾ ಶೋಚನೀಯ ಸ್ಥಿತಿಯಲ್ಲಿವೆ. ಇದಕ್ಕಾಗಿ ಸಮಿತಿಯೊಂದನ್ನು ರಚಿಸಿ ಅದರಿಂದ ಗೊಲ್ಲರಹಟ್ಟಿಗಳನ್ನು ಗುರುತಿಸಿ ಮೂಲಭೂತ ಸೌಕರ್ಯ ಕಲ್ಪಿಸಿಕೊಡುವ ಕಾರ್ಯವಾಗಬೇಕು



ಎಂದು ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 6ರಂದು ಶಾಸಕರಾದ ಎಂ.ನಾಗರಾಜ ಅವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ದಾಖಲೆ ರಹಿತ ಮಜರೆ ಗ್ರಾಮಗಳನ್ನು ಅಧಿಕೃತವಾಗಿ ಗುರುತಿಸಿ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಕಾರ್ಯಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಈಗಾಗಲೇ ರಾಜ್ಯದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಸಂಬಂಧ ಆಗಾಗ ವಿಡಿಯೋ ಸಂವಾದ ನಡೆಸಿ ನಿರ್ದೇಶನ ನೀಡಲಾಗುತ್ತಿದೆ. ಈ ಬಗ್ಗೆ ಆಯಾ ಶಾಸಕರೊಂದಿಗೆ ಸಹ ಚರ್ಚಿಸಿದ್ದು ಆಯಾ ಕಡೆಗಳಲ್ಲಿ ಕಂದಾಯ ಗ್ರಾಮಗಳು ಪಟ್ಟಿಯಿಂದ ಬಿಟ್ಟು ಹೋಗಿರುವ ಲಂಬಾಣಿ ತಾಂಡಾ, ಗೊಲ್ಲರಹಟ್ಟಿ, ವಡ್ಡರಹಟ್ಟಿ, ಕುರುಬರಹಟ್ಟಿ, ನಾಯಕರಹಟ್ಟಿ, ಮಜರೆಗ್ರಾಮ, ಹಾಡಿ, ದೊಡ್ಡಿ, ಪಾಳ್ಯ, ಕ್ಯಾಂಪ್, ಕಾಲೋನಿ ಮತ್ತು ಇತರೆ ದಾಖಲೆ ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಗುರುತಿಸಿ ಪಟ್ಟಿಯಲ್ಲಿ ಸೇರಿಸಿ ಪ್ರಸ್ತಾವನೆ ಕಳುಹಿಸಿ ಎಂದು ತಿಳಿಸಲಾಗಿದೆ. ಅಂತಹ ಪಟ್ಟಿಯು ನಮಗೆ ಲಭ್ಯವಾದರೆ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು ಎಂದು ಸಚಿವರು ತಿಳಿಸಿದರು.

ದಾಖಲೆ ರಹಿತ ಜನ ವಸತಿ ಪ್ರದೇಶಗಳು ಸಾಮಾನ್ಯವಾಗಿ ತಾಂಡಾ, ಹಟ್ಟಿ, ಹಾಡಿ, ದೊಡ್ಡಿ, ಪಾಳ್ಯ, ಮಜರೆ, ಕ್ಯಾಂಪ್, ಕಾಲೋನಿ ಇತ್ಯಾದಿ ಹೆಸರುಗಳಿಂದ ಗುರುತಿಸಲ್ಪಡುತ್ತವೆ. ಇಂತಹ ದಾಖಲೆ ರಹಿತ ಜನವಸತಿ ಪ್ರದೇಶಗಳನ್ನು ಹೊಸದಾಗಿ ಕಂದಾಯ ಗ್ರಾಮವೆಂದು ಘೋಷಿಸಲು ಇಲ್ಲವೇ ಅದನ್ನು ಹಾಲಿ ಇರುವ ಕಂದಾಯ ಗ್ರಾಮದ ಭಾಗವಾಗ ಪರಿಗಣಿಸಲು ಅಥವಾ ಅಸ್ತಿತ್ವದಲ್ಲಿರುವ ಗ್ರಾಮದಲ್ಲಿ ಸೇರ್ಪಡೆಗೊಳಿಸಲು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಪ್ರಕರಣ 5ರಡಿಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಹೀಗಾಗಿ ರಾಜ್ಯದಲ್ಲಿ ವಿವಿಧೆಡೆಗಳಲ್ಲಿನ ಲಂಬಾಣಿ ತಾಂಡಾ, ಗೊಲ್ಲರಹಟ್ಟಿ, ವಡ್ಡರಹಟ್ಟಿ, ಕುರುಬರಹಟ್ಟಿ, ನಾಯಕರಹಟ್ಟಿ, ಮಜರೆಗ್ರಾಮ, ಹಾಡಿ, ದೊಡ್ಡಿ, ಪಾಳ್ಯ, ಕ್ಯಾಂಪ್, ಕಾಲೋನಿ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತನೆ ಆಗಿದೆಯೋ ಇಲ್ಲವೋ ಎಂಬುದನ್ನು ತಿಳಿದುಕೊಂಡು ಅಗತ್ಯ ಕ್ರಮ ವಹಿಸುವ ನಿಟ್ಟಿನಲ್ಲಿ ಡ್ರೋಣ ಸರ್ವೆ ನಡೆಸಲಾಗುತ್ತಿದೆ ಎಂದು ಸಚಿವರಾದ ಕೃಷ್ಣ ಭೈರೇಗೌಡ ಅವರು ಪ್ರತಿಕಿಯಿಸಿದರು.

# ಶೀಘ್ರವೇ ಕ್ರೀಡಾ ಶಾಲೆಗಳ 180 ದೈಹಿಕ ಶಿಕ್ಷಕರ ನೇಮಕಾತಿ: ಸಚಿವ ಬಿ.ನಾಗೇಂದ್ರ



ಬೆಳಗಾವಿ: ಸುವರ್ಣವಿಧಾನಸೌಧ: ರಾಜ್ಯದಲ್ಲಿ ಕ್ರೀಡಾ ಶಾಲೆ ಹಾಗೂ ವಸತಿ ನಿಯಲಗಳ 180 ದೈಹಿಕ ಶಿಕ್ಷಕರ ತರಬೇತಿ ಪೂರ್ಣಗೊಂಡಿದ್ದು, ಶೀಘ್ರವೇ ಸ್ಥಳ ನಿಯೋಜಿಸಿ ನೇಮಕಾತಿ ಮಾಡುವುದಾಗಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡ ಸಚಿವ ಬಿ.ನಾಗೇಂದ್ರ ಹೇಳಿದರು.

ಬುಧವಾರ ವಿಧಾನಸಭಾ ಅಧಿವೇಶನದಲ್ಲಿ ಶಾಸಕ ದರ್ಶನ್ ಹಾಗೂ ಸಿ.ಎನ್.ಬಾಲಕೃಷ್ಣ ಅವರ ಚುಕ್ಕೇ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಕ್ರೀಡೆಗೆ ಹೆಚ್ಚಿನ ಮಹತ್ವ ನೀಡಿದೆ. ಅಮೃತ ದತ್ತು ಕ್ರೀಡಾ ಯೋಜನೆಯಡಿ ವಿವಿಧ ಕ್ರೀಡೆಗಳಲ್ಲಿ ಪದಕ ವಿಜೇರಾತ 75 ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಅಗತ್ಯವಾದ ತರಬೇತಿ ಹಾಗೂ ಪ್ರೋತ್ಸಾಹ ನೀಡಲಾಗುತ್ತಿದೆ.

ಇದರೊಂದಿಗೆ ಕ್ರೀಡಾಪುಟುಗಳಿಗೆ 2024ರ ಒಲಂಪಿಕ್ ಕ್ರೀಡಗಳಿಲ್ಲಿ ಪಾಲ್ಗೊಳ್ಳಲು ರೂ.10 ಲಕ್ಷ ವೆಚ್ಚದಲ್ಲಿ ತರಬೇತಿ ನೀಡಲಾಗುತ್ತಿದೆ.

ಕ್ರೀಡಾ ಇಲಾಖೆಯಿಂದ ರಾಷ್ಟೊಥಯ ಮತ್ತು ಅಂತರಾಷ್ಟೊಥಯ ಕ್ರೀಡೆಗಳಲ್ಲಿ ವಿಜೇತರಾದ ಕ್ರೀಡಾಪುಟುಗಳಿಗೆ ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ, ಅಮೃತ ಕ್ರೀಡಾದತ್ತು ಯೋಜನೆ, ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ.

ರಾಜ್ಯದಲ್ಲಿ 2 ಕ್ರೀಡಾ ಶಾಲೆ ಹಾಗೂ 32 ಕ್ರೀಡ ವಸತಿ ನಿಲಯಗಳು ಇದ್ದು ಒಟ್ಟು 2482 ಕ್ರೀಡಾಪಟುಗಳು ಪ್ರವೇಶ ಪಡೆದಿದ್ದಾರೆ. ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಪ್ರತಿ ಜಿಲ್ಲೆಗಳಲ್ಲಿ ಕ್ರೀಡಾ ತರಬೇತುದಾರರನ್ನು ನೇಮಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶ್ರವಣಬೆಳಗೊಳ ಶಾಸಕ ಬಾಲಕೃಷ್ಣ ಸಿ.ಎನ್. ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ 125 ತಾಲ್ಲೂಕು ಕ್ರೀಡಾಂಗಣಗಳು ಇವೆ. ಕ್ರೀಡಾ ಇಲಾಖೆ ಕಳೆದ ಎರೆಡು ವರ್ಷದಲ್ಲಿ ಒಟ್ಟು ರೂ.56 ಕೋಟಿಗಳನ್ನು ಕ್ರೀಡಾಂಗಣಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡದೆ.

ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದ ಚನ್ನರಾಯಪಟ್ಟಣದ ತಾಲ್ಲೂಕು ಕ್ರೀಡಾಂಗಣವನ್ನು ಒಟ್ಟು 7 ಎಕರೆಯಲ್ಲಿ ನಿರ್ಮಿಸಲಾಗಿದೆ. 400 ಮೀಟರ್ ಮಣ್ಣಿನ ಓಟದ ಅಂಕಣ, ಜಿಮ್ ಕೊಠಡಿ, ಹೈಮಾಸ್ಟ್ ದೀಪ್ ಪೆವಿಲಿಯನ್ನ ಹಾಗೂ ಶೌಚಾಲಯ ಕಟ್ಟಗಳನ್ನು ನಿರ್ಮಿಸಲಾಗಿದ್ದು, ವಿದ್ಯುತ್ ಸರಬರಾಜು ಸೌಲಭ್ಯ ಕಲ್ಪಿಸಲಾಗಿದೆ ಎಂದರು.

# ಚಳಿಗಾಲ ಅಧಿವೇಶನ: ನೇಕಾರರ ಬೃಹತ್ ಪ್ರತಿಭಟನೆ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ರಾಜ್ಯ ನೇಕಾರ ಸೇವಾ ಸಂಘದಿಂದ ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿ ಮಾತನಾಡಿ, ರಾಜ್ಯಾದ್ಯಂತ ನೇಕಾರ ಮತ್ತು ನೇಕಾರಿಕೆ ಆರ್ಥಿಕ ಮುಗ್ಗಟ್ಟಿನಿಂದ ಮಾರುಕಟ್ಟೆಯ ಅಸ್ತಿರತೆಯಿಂದ ವೈಜ್ಞಾನಿಕ ಬೆಲೆಯನ್ನು ನಿಗದಿ ಮಾಡದ ಕಾರಣ ಸರ್ಕಾರದ ಸಮರ್ಪಕವಾದ ಯೋಜನೆಗಳು ಕಟ್ಟಕಡೆಯ ನೇಕಾರರಿಗೆ ತಲುಪದೇ ವಂಚಿತರಾಗಿದ್ದಾರೆ. ಅತಿವೃಷ್ಠಿ, ಅನಾವೃಷ್ಠಿ, ಜಿಎಸ್ಟಿ, ನೋಟ್ ಬಂದ್, ಲೌಕ್ಡೌನ್ ನಿಂದ ಔದ್ಯೋಗಿಕ, ಶೈಕ್ಷಣಿಕ, ಆರ್ಥಿಕ ಭದ್ರತೆಯೂ ಇಲ್ಲದಂತಾಗಿದೆ. ಇಂದು ನೇಕಾರಿಕೆಯಿಂದ ಲಕ್ಷಾಂತರ ಜನರು ಉದ್ಯೋಗ ತೊರೆದು ಹೋಗುತ್ತಿದ್ದು, ಸಮರ್ಪಕ ಯೋಜನೆಗಳು ಸರ್ಕಾರದಿಂದ ಸಿಗದೆ 60 ಲಕ್ಷ ನೇಕಾರರಲ್ಲಿ ಕೇವಲ 10% ನೇಕಾರರು ಮಾತ್ರ ಈ ಉದ್ಯಮದಲ್ಲಿ ತೊಡಿಗಿಸಿಕೊಂಡಿದ್ದಾರೆ. ಮುಂದಿನ ಕೆಲವು ವರ್ಷಗಳಲ್ಲಿ ನೇಕಾರರೆ ಇಲ್ಲದ ಸ್ಥಿತಿ ನಿರ್ಮಾಣ ಆಗುವದರಲ್ಲಿ ಎರಡು ಮಾತಿಲ್ಲ ಎಂದು ಕಳವಳ ವ್ಯಕ್ತ ಪಡಿಸಿದರು.

ಕೂಡಲೇ ಸರ್ಕಾರ ನೇಕಾರರ ಸಮಸ್ಯೆ ಗಳ ಕುರಿತು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಲು ಮುಂದಾಗಬೇಕು. ಸದ್ಯ ರಾಜ್ಯ ಸರಕಾರ ನೇಕಾರರ ಸಮುದಾಯದ ಬಗ್ಗೆ ತಾರತಮ್ಯ ಮಾಡುತ್ತಿದೆ. ರಾಜ್ಯ ಜವಳಿ ಇಲಾಖೆಯಿಂದ ನೇಕಾರರ ಕಲ್ಯಾಣವಾಗುತ್ತಿಲ್ಲ. ಮಹಾರಾಷ್ಟ್ರದಲ್ಲಿ ನೇಕಾರರಿಗೆ ನೀಡಲಾಗಿರುವ ಸೌಲಭ್ಯವನ್ನು ರಾಜ್ಯದಲ್ಲೂ ನೀಡಬೇಕು. ಜತೆಗೆ ಮಹಾರಾಷ್ಟ್ರದಲ್ಲಿ ರಚನೆ ಮಾಡಲಾದ ಮಹಾಮಂಡಳ ರಾಜ್ಯದಲ್ಲಿ ಸ್ಥಾಪನೆಯಾಗಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ 45 ಲಕ್ಷ ನೇಕಾರರು ಇದ್ದಾರೆ. ನೇಕಾರರನ್ನು ರಾಜಕೀಯ ಪಕ್ಷಗಳು ಮತಬ್ಯಾಂಕ್ ಉದ್ದೆ?ಶಕ್ಕೆ ಮಾತ್ರ ಬಳಸಿಕೊಳ್ಳುತ್ತಿವೆ. ಅವರ ಸಮಸ್ಯೆ ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿಲ್ಲ. ಶೀಘ್ರವೇ ರಾಜ್ಯದ ಎಲ್ಲ ನೇಕಾರರ ಸಮಸ್ಯೆಗಳಿಗೆ ಪರಿಹಾರ ನೀಡಲು ಸರ್ಕಾರ ಮುಂದಾಗಬೇಕು ಎಂದು ಎಚ್ಚರಿಕೆ ನೀಡಿದರು.

ಬೇಡಿಕೆಗಳು: ಕಟ್ಟಡ ಕಾರ್ಮಿಕ ಮಾದರಿಯಲ್ಲಿ ವೃತ್ತಿಪರ ನೇಕಾರರಿಗೂ ಕಾರ್ಮಿಕ ಸೌಲಭ್ಯಗಳನ್ನು ಒದಗಿಸುವುದು ಮತ್ತು ಕಾರ್ಮಿಕ ಸೌಲಭ್ಯಗಳನ್ನು



ಒಳಗೊಂಡಂತೆ ಕಾರ್ಡಗಳನ್ನು ಹಂಚಿಕೆ ಮಾಡಬೇಕು, 20 ಎಚ್.ಪಿ.ವರೆಗೆ ವಿದ್ಯುತ್ ಸಂಪರ್ಕ ಹೊಂದಿರುವ ನೇಕಾರರಿಗೆ 500 ಯೂನಿಟ್ ಉಚಿತ ಒದಗಿಸಿ 500 ರಿಂದ ಹೆಚ್ಚುವರಿ ಬಳಕೆಯ ಯೂನಿಟ್‌ಗೆ 1.25 ರೂ. ಯುನಿಟ್‌ನಂತೆ ಬೇರೆ ಯಾವುದೇ ಚಾರ್ಜಗಳನ್ನು ವಿಧಿಸದೇ ವಿದ್ಯುತ್ ಒದಗಿಸಬೇಕು, ತಮಿಳುನಾಡಿನಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಮೂಲಕ ಸರಕಾರದ ಅನೇಕ ಇಲಾಖೆಗಳಿಗೆ ಬಟ್ಟೆ ಒದಗಿಸಲು ವೃತ್ತಿಪರ ನೇಕಾರರಿಗೆ ನಿರಂತರ ಉದ್ಯೋಗ ಒದಗಿಸುವ ಯೋಜನೆಯ ಮಾದರಿಯಲ್ಲಿ ಕರ್ನಾಟಕದಲ್ಲೂ ಕೂಡ ಜಾರಿ ಮಾಡಬೇಕು.

ಕೆ.ಎಚ್.ಡಿ.ಸಿ. ನಿಗಮದ ಕೈಮಗ್ಗ ನೇಕಾರರಿಗೆ ಕೈಗೆ ಕೆಲಸವಿಲ್ಲದೆ ಕೂಲಿ ಇಲ್ಲದೆ ಸಾಲದ ಹೊರೆಯಲ್ಲಿ ನಿಗಮವು ಮುಚ್ಚುವ ಸ್ಥಿತಿಯಲ್ಲಿದ್ದು, ಇದನ್ನು ಪುನರುಜ್ಜೀವನಗೊಳಿಸಿ ನಿರಂತರ ನೇಕಾರಿಕೆ ಸಿಗುವಂತೆ ವ್ಯವಸ್ಥೆ ಮಾಡಬೇಕು, ಸಹಕಾರಿ ಸಂಘ–ಸಂಸ್ಥೆಗಳ ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳನ್ನೊಳಗೊಂಡಂತೆ ಸಂಪೂರ್ಣ ಸಾಲ ಮನ್ನಾ ಮಾಡಬೇಕು. 5. ಸಾಲದ ಹೊರೆಯಿಂದ ರಾಜ್ಯದಲ್ಲಿ 47 ಜನ ನೇಕಾರರ ಆತ್ಮಹತ್ಯೆಗಳಾಗಿದ್ದು ಪ್ರತಿ ಕುಟುಂಬಕ್ಕೂ 10 ಲಕ್ಷ ರೂ.ಗಳ ಪರಿಹಾರ ಒದಗಿಸಬೇಕು. ಇವುಗಳು ಮುಂದುವರೆಯಬಾರದೆಂದರೆ ಸಂಪೂರ್ಣ ಸಾಲ ಮನ್ನಾ ಆಗಲೇಬೇಕು.

6. ವೃತ್ತಿಪರ ನೇಕಾರರ 5–6 ತಿಂಗಳಿನ ಬಾಕಿ ವಿದ್ಯುತ್ ಬಿಲ್‌ನ್ನು ಸರ್ಕಾರವೇ ಭರಿಸಿಕೊಳ್ಳಬೇಕು, 2 ವರ್ಷಗಳಿಂದ ಸಹಕಾರಿ ಸಂಘ–ಸಂಸ್ಥೆಗಳ ಬಡ್ಡಿ ಸಹಾಯಧನ ಬಾರದೇ ಇದ್ದು, ನೇಕಾರರು ಬಡ್ಡಿಗೆ ಬಡ್ಡಿ ತುಂಬುವ ಸ್ಥಿತಿ ನಿರ್ಮಾಣವಾಗಿದೆ. ತುರ್ತಾಗಿ ಬಡ್ಡಿ ಸಹಾಯಧನವನ್ನು ಬಿಡುಗಡೆ ಮಾಡಬೇಕು, ನೇಕಾರ ಸಮ್ಮಾನ ಯೋಜನೆಯನ್ನು ಪ್ರತಿ ವರ್ಷ ರೂ. 10 ಸಾವಿರಗಳಿಗೆ ಏರಿಸಿ ಕೂಡಲೇ ಹಣವನ್ನು ಸಂದಾಯ ಮಾಡಬೇಕು, ಕೈಮಗ್ಗ ಮತ್ತು ಜವಳಿ ಇಲಾಖೆಗೆ ಸರ್ಕಾರದಿಂದ ಕನಿಷ್ಠ 1000 ರಿಂದ 1500 ಕೋಟಿ ರೂ.ಗಳ ವಿಶೇಷ ಅನುದಾನ ಒದಗಿಸಿ ಅನುದಾನ ಒದಗಿಸಿ ಜಾರಿಯಲ್ಲಿರುವ ಯೋಜನೆಗಳನ್ನು ಸಮರ್ಪಕವಾಗಿ ಕಟ್ಟಕಡೆಯ ನೇಕಾರನಿಗೆ ಒದಗಿಸಬೇಕು. 10. ಮಗ್ಗ ನಡೆಸಲು ಅನೇಕ ಇಲಾಖೆಗಳಿಂದ ಪರವಾನಿಗೆ ಬೇಕೆಂದು ಕಟ್ಟೆಳೆ ಹಾಕುತ್ತಿದ್ದು.

ಈ ತೊಂದರೆ ನಿವಾರಣೆಗಾಗಿ ನೇಕಾರಿಕೆಯನ್ನು ಗುಡಿ ಕೈಗಾರಿಕೆ ಎಂದು ಘೋಷಿಸಬೇಕು, ನೇಕಾರರು ಅನುಭವಿಸುತ್ತಿರುವ ಮಾರುಕಟ್ಟೆ ತೊಂದರೆಯನ್ನು ನಿವಾರಿಸಲು ಸರಕಾರದಿಂದ ಜನ ಸಾಂದ್ರತೆ ಇರುವಲ್ಲಿ ನೇಕಾರರ ನೇರ ಉತ್ಪಾದನೆಗಳ ಮಾರುಕಟ್ಟೆಯನ್ನು ಕಲ್ಪಿಸಿ ಕೊಡಬೇಕು, ಅನೇಕ ಜಿಲ್ಲೆಗಳಲ್ಲಿ 2 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಇಲಾಖೆಯ ಅಧಿಕಾರಿಗಳಿಂದ ನೇಕಾರರಿಗೆ ಸಮರ್ಪಕವಾದ ಇಲಾಖೆಯ ಯೋಜನೆಗಳ ಮಾಹಿತಿ ಮತ್ತು ಸೇವೆ ದೊರೆಯದೇ ಇರುವ ಕಾರಣ ವರ್ಗಾವಣೆಗೊಳಿಸಬೇಕು. ಮತ್ತು ಖಾಲಿ ಇರುವ ಎಲ್ಲ ಹುದ್ದೆಗಳನ್ನು ಭರ್ತಿ ಮಾಡಿ ಇಲಾಖೆಯಿಂದ ನೇಕಾರರಿಗೆ ಸೇವೆ ಒದಗಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ರಾಜೇಂದ್ರ ಮಿರ್ಜಿ, ಮಲ್ಲಪ್ಪ ಮಿರ್ಜಿ, ಅರ್ಜುನ ಕುಂಬಾರ, ರಾಜು ಬಿಜ್ಜರಗಿ, ಲಕ್ಷ್ಣ ಡೊಣವಾಡೆ, ಸುರೇಶ ಗೌಡರ ಸೇರಿದಂತೆ ಅನೇಕ ನೇಕಾರರು ಭಾಗವಹಿಸಿದ್ದರು.

# ಅವಿಷ್ಕೃತ ಶೈಕ್ಷಣಿಕ ಚಟುವಟಿಕೆಗಳಿಗಾಗಿ ಮೂಡಲಗಿ ವಲಯಕ್ಕೆ ರಾಷ್ಟ್ರೀಯ ಪುರಸ್ಕಾರ

ಮೂಡಲಗಿ: 2020-21 ಮತ್ತು 2021-22ರ ಸಾಲಿನಲ್ಲಿ ರಾಷ್ಟ್ರಮಟ್ಟದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅವಿಷ್ಕೃತ್ ಶೈಕ್ಷಣಿಕ ಚಟುವಟಿಕೆಗಳು ಮತ್ತು ಉತ್ತಮ ಶೈಕ್ಷಣಿಕ ಪ್ರಯೋಗಗಳನ್ನು ಶಾಲಾ ಹಂತದಲ್ಲಿ ಮಾಡಿರುವ ಸಾಧನೆಗಳಿಗಾಗಿ ವಲಯ ಶಿಕ್ಷಣಾಧಿಕಾರಿಗಳು ಮತ್ತು ಜಿಲ್ಲಾ ಹಂತದ ಶಿಕ್ಷಣಾಧಿಕಾರಿಗಳಿಗೆ ನೀಡುವ ರಾಷ್ಟ್ರೀಯ ಮಟ್ಟದ ಪ್ರಶಸ್ತಿಗೆ ಮೂಡಲಗಿ ವಲಯ ಪಾತ್ರವಾಗಿದೆ.



ಮಂಗಳವಾರದಂದು ದೆಹಲಿಯ ಡಾ. ಬಿ.ಆರ್. ಅಂಬೇಡ್ಕರ ಅಂತರಾಷ್ಟ್ರೀಯ ಭೀಮ ಭವನದಲ್ಲಿ ಈ ರಾಷ್ಟ್ರೀಯ ಪುರಸ್ಕಾರವನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ಮೂಡಲಗಿ ಬಿಇಒ ಎ.ಸಿ. ಮನ್ನಿಕೇರಿ ಅವರಿಗೆ ಪ್ರಧಾನ ಮಾಡಿದರು.

ದೇಶ ವ್ಯಾಪ್ತಿಯ ಜಿಲ್ಲಾ ಹಂತದ ಶಿಕ್ಷಣಾಧಿಕಾರಿಗಳು ಮತ್ತು ವಲಯ ಶಿಕ್ಷಣಾಧಿಕಾರಿಗಳಿಗೆ ನೀಡುವ ಪ್ರಶಸ್ತಿ ಇದಾಗಿದ್ದು, ಪ್ರಶಸ್ತಿ ಪತ್ರ, ಸ್ಮರಣಿಕೆ ಮತ್ತು 10 ಸಾವಿರ ರೂ.ಗಳ ನಗದು ಪುರಸ್ಕಾರವನ್ನು ಈ ಪ್ರಶಸ್ತಿಯು ಹೊಂದಿದೆ.

ಕೇಂದ್ರ ಸರ್ಕಾರದ ರಾಷ್ಟ್ರೀಯ ಶೈಕ್ಷಣಿಕ ಯೋಜನೆ ಹಾಗೂ ಆಡಳಿತ ನೋಡಿಕೊಳ್ಳುತ್ತಿರುವ ರಾಷ್ಟ್ರೀಯ ಸಂಸ್ಥೆಯಾದ ನೀಪಾ ದಿಂದ ನೀಡಲಾಗುತ್ತಿದೆ.

ಕಳೆದ 10 ವರ್ಷಗಳಿಂದ ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸಿರುವುದು ಮತ್ತು ಸ್ಥಿರತೆಯನ್ನು ಕಾಪಾಡಿಕೊಂಡಿರುವುದಕ್ಕೆ ಈ ಬಾರಿಯೂ ಮತ್ತೇ ಮೂಡಲಗಿ ವಲಯವನ್ನು ಆಯ್ಕೆ ಮಾಡಿಕೊಳ್ಳಲಾಗಿದೆ.

ಕೇಂದ್ರ ಶಿಕ್ಷಣ ಇಲಾಖೆಯ ಕಾರ್ಯದರ್ಶಿ ಸಂಜೀವಕುಮಾರ ಸೇರಿದಂತೆ ಹಲವು ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಎರಡು ದಿನಗಳವರೆಗೆ ನಡೆದ ರಾಷ್ಟ್ರೀಯ ಕಾರ್ಯಾಗಾರದಲ್ಲಿ ದೇಶದ 65 ಜನ ಜಿಲ್ಲಾ, ವಲಯ ಶಿಕ್ಷಣಾಧಿಕಾರಿಗಳು ಭಾಗಿಯಾಗಿದ್ದರು.

ಇದರಲ್ಲಿ ಕರ್ನಾಟಕದಿಂದ 6 ಜನರು ಭಾಗಿಯಾಗಿ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.

ಪ್ರಶಸ್ತಿಯ ಆರಂಭದ ವರ್ಷವೇ 2013-14 ರಲ್ಲಿ ಮೂಡಲಗಿ ಶೈಕ್ಷಣಿಕ ವಲಯವು ಈ ಪ್ರಶಸ್ತಿಗೆ ಪಾತ್ರವಾಗಿದ್ದು, ಅಂದಿನ ಮಾನವ ಅಭಿವೃದ್ಧಿ ಸಚಿವೆ ಸ್ಮಂತಿ ಇರಾಣಿ ಅವರು ಮನ್ನಿಕೇರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದ್ದನ್ನು ಸ್ಮರಿಸಬಹುದು.



ಮೂಡಲಗಿ ಶೈಕ್ಷಣಿಕ ವಲಯಕ್ಕೆ ಮತ್ತೇ ರಾಷ್ಟ್ರೀಯ ಪುರಸ್ಕಾರ ಲಭಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಅರಭಾವಿ ಕ್ಷೇತ್ರದ ಶಾಸಕನಾದ ನಂತರ ಇಲ್ಲಿಯವರೆಗೂ ಶೈಕ್ಷಣಿಕ ಕ್ಷೇತ್ರಕ್ಕೆ ಪ್ರಥಮ ಪ್ರಾಶಸ್ತ್ಯ ನೀಡುತ್ತ ಬಂದಿದ್ದೇನೆ. ಶಿಕ್ಷಣದ ಅಮೂಲಾಗ್ರ ಬದಲಾವಣೆಗೆ ಶ್ರಮಿಸುತ್ತಿದ್ದೇವೆ. ಶಿಕ್ಷಣವೊಂದೇ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯವಿದೆ. ಈ ದಿಸೆಯಲ್ಲಿ ನಮ್ಮ ವಲಯವು ಪ್ರತಿ ವರ್ಷ ಉತ್ತಮ ಸಾಧನೆಗಳನ್ನು ಮಾಡುತ್ತ, ಹಲವು ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿಗಳನ್ನು ಬಾಚುತ್ತ ಬಂದಿರುವುದು ಶ್ಲಾಘನೀಯವಾಗಿದೆ. ಅದಕ್ಕಾಗಿ ಬಿಇಓ ಅಜೀತ ಮನ್ನಿಕೇರಿ ಮತ್ತು ಅವರ ತಂಡಕ್ಕೆ ನನ್ನ ಅಭಿನಂದನೆಗಳು.

**-ಬಾಲಚಂದ್ರ ಜಾರಕಿಹೊಳಿ,**
**ಶಾಸಕರು, ಅರಭಾವಿ**

ಶೈಕ್ಷಣಿಕ ಕಾರ್ಯಕ್ರಮಗಳ ಆಯೋಜನೆ ಮತ್ತು ಅನುಷ್ಠಾನದಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಶಿಕ್ಷಣಕ್ಕಾಗಿ ನಿರಂತರ ಪ್ರೋತ್ಸಾಹವನ್ನು ನೀಡುತ್ತಿದ್ದಾರೆ. ಮೂಡಲಗಿ ವಲಯವು ಎರಡು ಬಾರಿ ರಾಷ್ಟ್ರೀಯ ಪುರಸ್ಕಾರಕ್ಕೆ ಬಾಜನವಾಗುವಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಹಾಗೂ ವಲಯದ ಶಿಕ್ಷಕರ ಶ್ರಮವೂ ಅವಿರತವಾಗಿದೆ.

**-ಅಜೀತ ಮನ್ನಿಕೇರಿ,**
**ಕ್ಷೇತ್ರ ಶಿಕ್ಷಣಾಧಿಕಾರಿ, ಮೂಡಲಗಿ**

## 21 ವರ್ಷ ತಲೆಮರೆಸಿಕೊಂಡಿದ್ದ ಆರೋಪಿ ಬಂಧನ



ಹುಬ್ಬಳ್ಳಿ: 21 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಗಾಂಜಾ ಸಾಗಾಟ ಮಾಡುತ್ತಿದ್ದ ಆರೋಪಿಯನ್ನು ಬಂಧಿಸುವಲ್ಲಿ ವಿದ್ಯಾನಗರ ಪೊಲೀಸ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮೀಷನರೇಟ್ ಘಟಕದ ಅಂದಿನ ಕಾನೂನು ಮತ್ತು ಸುವ್ಯವಸ್ಥೆಯ ಉಪ ಪೊಲೀಸ್ ಆಯುಕ್ತರಾದ ಬಿ.ಆರ್. ರವಿಕಾಂತೇಗೌಡ ರವರು ದೂರು ಕೊಟ್ಟಿದ್ದರಲ್ಲಿ 09-12-2002 ರಂದು ಆರೋಪಿತರ ವಶದಿಂದ ಮತ್ತು ಮನೆಯಲ್ಲಿಂದ ಒಟ್ಟು 11 ಕ್ವಿಂಟಲ್ ತೂಕದ, ಗಾಂಜಾ ತುಂಬಿದ ಒಟ್ಟು 36 ಚೀಲಗಳನ್ನು ಮತ್ತು ಸಾಗಾಟ ಮಾಡಲು ಬಳಸಿದ ಒಂದು ಸ್ಕೂಟಿ, ಒಂದು ಬುಲೆಟ್ ಮತ್ತು ಒಂದು ಲಾರಿ ಸೇರಿ ಒಟ್ಟು 24 ಲಕ್ಷ 90 ಸಾವಿರ ರೂ. ಮೌಲ್ಯದ ಗಾಂಜಾ ಮತ್ತು ವಾಹನಗಳನ್ನು ಜಪ್ತಿ ಮಾಡಿದ್ದು, ಈ ಬಗ್ಗೆ ಹುಬ್ಬಳ್ಳಿ ವಿದ್ಯಾನಗರ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆರೋಪಿ ಕುಮಾರ ಸೂರಪ್ಪ ಶೆಟ್ಟಿ ಎನ್ನುವವನು ಪರಾರಿಯಾಗಿದ್ದನು. ಆರೋಪಿತನು ಪದೇ ಪದೇ ವಿಳಾಸವನ್ನು ಬದಲಾಯಿಸುತ್ತ ತಲೆಮರೆಸಿಕೊಂಡಿದ್ದರಿಂದ ಈ ಪ್ರಕರಣವು ನ್ಯಾಯಾಲಯದಲ್ಲಿ ಎಲ್.ಪಿ.ಸಿ. ಪ್ರಕರಣವಾಗಿತ್ತು. ಆರೋಪಿತನ ಪೂರ್ಣ ಹೆಸರು. ವಿಳಾಸ ಮತ್ತು ಭಾವಚಿತ್ರ ಇಲ್ಲದೇ ಇರುವದರಿಂದ ಅವನನ್ನು ಪತ್ತೆ ಮಾಡುವುದು ಇಲಾಖೆಗೆ ಸವಾಲಾಗಿತ್ತು. ಆರೋಪಿತನ ವಿರುದ್ಧ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಅರೆಸ್ಟ್ ವಾರೆಂಟ್‌ನ್ನು ಹೊರಡಿಸಿದ್ದು, ಅದರಂತೆ ಕಾರ್ಯಪ್ರವೃತ್ತರಾದ ಹುಬ್ಬಳ್ಳಿ ವಿದ್ಯಾನಗರ ಪೊಲೀಸರು ಆರೋಪಿತನ ಜಾಡು ಹಿಡಿದು ಹಾಸನ ಜಿಲ್ಲೆ ಚನ್ನರಾಯಪಟ್ಟಣ ನಗರದಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಯುವ ಪೀಳಿಗೆ ಸಂವಿಧಾನದ ಆಶೋತ್ತರ ಅಳವಡಿಸಿಕೊಂಡರೆ ದೇಶದ ಅಭಿವೃದ್ಧಿ ಸಾಧ್ಯ: ಶಾಲಿನಿ ರಜನೀಶ್



ಬೆಳಗಾವಿ: ಭಾರತದ ನಾಗರಿಕರಾದ ನಾವುಗಳು ಸಾರ್ವಭೌಮ, ಸಮಾಜವಾದಿ ಜಾತ್ಯಾತೀತ ಸೇರಿದಂತೆ ಸಂವಿಧಾನದ ಎಲ್ಲ ಆಶೋತ್ತರಗಳನ್ನು ಯುವ ಪೀಳಿಗೆ ನಿತ್ಯ ಜೀವನದಲ್ಲಿ ಅಳಡಿಸಿಕೊಂಡು ನಡೆದರೆ ದೇಶದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದು ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ಸುವರ್ಣ ಸೌಧದ ಅಡಿಟೋರಿಯಂ ಸಭಾಂಗಣದಲ್ಲಿ ಬುಧವಾರ ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ್ ಅವರ 67ನೇಯ ಮಹಾಪರಿನಿರ್ವಾಣ ದಿನದ ಅಂಗವಾಗಿ ಏರ್ಪಡಿಸಲಾಗಿದ್ದ ಡಾ. ಬಿ.ಆರ್ ಅಂಬೇಡ್ಕರವರ ಓದು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇಶದ ಗ್ರಾಮೀಣ ಪ್ರದೇಶಗಳಲ್ಲಿ ಹೆಣ್ಣು ಮಕ್ಕಳಿಗೆ ಉನ್ನತ ಶಿಕ್ಷಣ , ಬಾಲ್ಯ ವಿವಾಹ ಹಾಗೂ ಅಪೌಷ್ಠಿಕತೆ ಸೇರಿಂದಂತೆ ವಿವಿಧ ರೀತಿಯ ತಾರತಮ್ಯಗಳು ರೂಢಿಯಲ್ಲಿವೆ. ಇದು ನಿವಾರಣೆಯಾಗುವ ನಿಟ್ಟಿನಲ್ಲಿ ಎಲ್ಲರೂ ಶ್ರಮವಹಿಸಬೇಕಿದೆ ಎಂದು ಹೇಳಿದರು.

ಇವತ್ತಿನ ಯುವ ಪೀಳಿಗೆ ಶಿಕ್ಷಣದ ಜೊತೆಗೆ ಕ್ರೀಡೆ, ಕಲೆ, ಸಂಗೀತ, ಸಾಹಿತ್ಯ, ಹೀಗೇ ವಿವಿಧ ಕೌಶಲ್ಯ ಗಳಲ್ಲಿ ಆಸಕ್ತಿ ಇಟ್ಟು ತಮ್ಮದೇ ಆದ ಆಯ್ಕೆಗಳನ್ನು ತಗೆದುಕೊಂಡು ಸಾಧನೆ ಮಾಡುವುದರ ಮೂಲಕ ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಹೇಳಿದರು.

ಓದು ಕಾರ್ಯಕ್ರಮದ ನಿಮಿತ್ಯ ವಿವಿಧ ಸ್ಪರ್ಧೆಗಳಲ್ಲಿ ಭಾಗಿಯದ ಶಾಲಾ ಕಾಲೇಜು ಮಕ್ಕಳಿಗೆ ಶಾಲಿನಿ ರಜನೀಶ್ ಅವರು ಪ್ರಮಾಣ ಪತ್ರ ವಿತರಣೆ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ರಾಜಶ್ರೀ ಜೈನಾಪೂರ, ಸೇರಿದಂತೆ ವಿವಿಧ ಶಾಲಾ ಕಾಲೇಜು ಮಕ್ಕಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ನೇರ ಸಂದರ್ಶನ

ಬೆಳಗಾವಿ: ಬೆಳಗಾವಿ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾವಿಸಿದ್ದು, ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಡಿಸೆಂಬರ್ 18, 2023 ರಂದು ಬೆಳಗ್ಗೆ 11 ಗಂಟೆಗೆ ಬೆಳಗಾವಿ ರೈಲ್ವೇ ಸ್ಟೇಷನ್ ಬಳಿಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗ ಬಹುದಾಗಿದೆ. ಅರ್ಹತಾ ನಿಯಮಗಳು: ಅಭ್ಯರ್ಥಿಗಳು 10 ನೇ ತರಗತಿ ಉತ್ತೀರ್ಣರಾಗಿರಬೇಕು, ಕನಿಷ್ಠ 18 ವರ್ಷಗಳ ವಯೋಮಿತಿ ಹಾಗೂ ಗರಿಷ್ಠ ವಯೋಮಿತಿಗೆ ನಿರ್ಬಂಧವಿರುದಿಲ್ಲ, ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಂಜಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುವುದು. ನುರಿತ, ಸಂವಹನ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ರೂ.5000/- ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿಯನ್ನು ಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮೀಶನ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಬೆಳಗಾವಿ ವಿಭಾಗದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪಘಾತ; ಅಂಬ್ಯುಲೆನ್ಸ್ ಬಾರದೆ ವ್ಯಕ್ತಿ ನರಳಾಟ



ಬೆಳಗಾವಿ: ಸಿಎಂ ಸಿದ್ದರಾಮಯ್ಯ ಬರುವ ರಸ್ತೆಯಲ್ಲಿ ಅಪಘಾತ ನಡೆದು, ವ್ಯಕ್ತಿಯೊಬ್ಬರು ನರಳಾಡಿದರು. ಫೋನ್ ಮಾಡಿದರೂ ಸೂಕ್ತ ಸಮಯಕ್ಕೆ ಅಂಬ್ಯುಲೆನ್ಸ್ ಬಾರದ ಕಾರಣಕ್ಕೆ ಪೊಲೀಸರು ಪಿಕ್ ಅಪ್ ವಾಹನದಲ್ಲಿ ಗಾಯಾಳಾನ್ನು ರವಾನಿಸಿದರು. ಸಾಂಬ್ರಾ ವಿಮಾನ ನಿಲ್ದಾಣದಿಂದ ಬೆಳಗಾವಿ ನಗರ ಸಂಪರ್ಕಿಸುವ ರಸ್ತೆಯಲ್ಲಿ ಬಸ್ ಹಾಗೂ ಬೈಕ್ ನಡುವೆ ಅಪಘಾತ ನಡೆದಿದೆ. ಪರಿಣಾಮ ಮಹೇಶ ದುಡಗುಂಡಿ ಎಂಬುವವರು ಗಂಭೀರ ಗಾಯಗೊಂಡು ನರಳಾಡಿದರು. ಇತ್ತ ಅಪಘಾತ ನಡೆಯುತ್ತಿದ್ದಂತೆ ಸ್ಥಳೀಯರೆಲ್ಲರೂ ಸಹಾಯಕ್ಕೆ ಧಾವಿಸಿದರೂ, ಅಂಬ್ಯುಲೆನ್ಸ್ ಕರೆ ಮಾಡಿದರು. ಆದರೆ ಸರಿಯಾದ ಸಮಯಕ್ಕೆ ಅಂಬ್ಯುಲೆನ್ಸ್ ಬಾರದ ಕಾರಣಕ್ಕೆ 15 ನಿಮಿಷಕ್ಕೂ ಹೆಚ್ಚು ಕಾಲ ಮಹೇಶ್ ನರಳಾಡಿದರು. ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ಗಾಯಾಳನ್ನು ಚಿಕಿತ್ಸೆಗೆ ರವಾನೆ ಮಾಡಲಾಗಿದೆ. ಸೂಕ್ತ ಸಮಯಕ್ಕೆ ಅಂಬ್ಯುಲೆನ್ಸ್ ಬಾರದ್ದಕ್ಕೆ ಸ್ಥಳೀಯರು ಆಕ್ರೋಶ ಹೊರಹಾಕಿದರು. ಇತ್ತ ತ್ವರಿತವಾಗಿ ಗಾಯಾಳನ್ನು ಆಸ್ಪತ್ರೆಗೆ ರವಾನಿಸಿದ ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಯಿತು. ಮಾರಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಹುಕ್ಕೇರಿ ಹಿರೇಮಠದ ಶಾಖೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ




ಬೆಳಗಾವಿ: ಬೆಳಗಾವಿ ನಗರದಲ್ಲಿರುವ ಹುಕ್ಕೇರಿ ಹಿರೇಮಠದ ಶಾಖೆಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಭೇಟಿ ನೀಡಿ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.

ಇದೇ ಸಂದರ್ಭದಲ್ಲಿ ವಿಜಯೇಂದ್ರ ಅವರು ಮಾತನಾಡಿ, ಹುಕ್ಕೇರಿ ದಸರಾ ಉತ್ಸವಕ್ಕೆ ಬಂದಾಗ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ನೀವು ರಾಜ್ಯಾಧ್ಯಕ್ಷನಾಗಿಯೇ ಬೆಳಗಾವಿಗೆ ಬರುತ್ತಿಯಾ ಎಂದು ಆಶೀರ್ವಾದ ಮಾಡಿದ್ದರು. ಅದರ ಫಲವಾಗಿ ಇಂದು ನಾನು ರಾಜ್ಯಾಧ್ಯಕ್ಷನಾಗಿದ್ದೇನೆ. ಎಲ್ಲರ ಆಶೀರ್ವಾದ ನನ್ನ ಮೇಲೆ ಇದೆ. ಪಕ್ಷದ ಎಲ್ಲರನ್ನೂ ಒಗ್ಗೂಡಿಸಿಕೊಂಡು ಕಾರ್ಯವನ್ನು ನಿರ್ವಹಿಸುತ್ತೇನೆ ಎಂದರು.

ಬೆಳಗಾವಿಯ ನಾಗನೂರು ರುದ್ರಾಕ್ಷಿಮಠಕ್ಕೆ ಭೇಟಿ ನೀಡಿ ಡಾ. ಅಲ್ಲಮಪ್ರಭು ಸ್ವಾಮೀಜಿ ಹಾಗೂ ಕಾರಂಜಿಮಠದ ಗುರುಸಿದ್ದ ಸ್ವಾಮೀಜಿಯವರ ಆಶೀರ್ವಾದ ಪಡೆದಿದ್ದನು ಸ್ಮರಿಸಿದರು.

ಬಿಜೆಪಿ ನಗರ ಘಟಕದ ಜಿಲ್ಲಾಧ್ಯಕ್ಷ ಅನಿಲ್ ಬೆನಕೆ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ರಾಜ್ಯ ಬಿಜೆಪಿ ವಕ್ತಾರ ಎಂ.ಬಿ.ಜೀರಲಿ, ಮುಕ್ತಾರ ಹುಸೇನ್ ಪಠಾಣ, ನಿವೃತ್ತ ಜಿಲ್ಲಾಧಿಕಾರಿ ಮಹಾಂತೇಶ ಹಿರೇಮಠ, ಮಹಾಂತೇಶ ಒಕ್ಕುಂದ, ವೀರುಪಾಕ್ಷಯ್ಯ ನೀರಲಗಿಮಠ, ಚಂದ್ರಶೇಖರ ಸವಡಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಕಟ್ಟಡ ಕಾರ್ಮಿಕ ಸಂಘಟನೆಗಳ ಒತ್ತಾಯ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಹಾವೇರಿ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘಗಳ ಜಂಟಿ ಸಮಿತಿ ಸದಸ್ಯರು ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಬುಧವಾರ ಪ್ರತಿಭಟನೆ ನಡೆಸಿದರು.

ಹಾವೇರಿ ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘಗಳ ಅಧ್ಯಕ್ಷ ಅಜಯಕುಮಾರ ಹಡಪದ ಮಾತನಾಡಿ, ಕೇಂದ್ರದ ನರೇಂದ್ರ ಮೋದಿ ಸರಕಾರ ಕಾರ್ಮಿಕರ ಪರ ಕೆಲಸ ಮಾಡದೆ ಕಾರ್ಪೋರೇಟ್ ಬಂಡವಾಳಶಾಹಿಗಳ ಪರವಾಗಿ ಕೆಲಸ ಮಾಡುತ್ತಿದ್ದು, ಕಾರ್ಮಿಕರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿದ್ದಾರೆ ಎಂದು ಆರೋಪಿಸಿದರು.

ಇಂದಿನ ಬಂಡವಾಳ ಶಾಹಿಗಳ ಕೈಯಲ್ಲಿ ಕಾರ್ಮಿಕರು ನಲುಗಿ ಹೋಗಿದ್ದಾರೆ. ಆದರೆ ಕೇಂದ್ರ ಸರಕಾರ ಮಾತ್ರ ಕಾರ್ಮಿಕರ ಪರವಾಗಿ ನಿಲ್ಲುತ್ತಿಲ್ಲ. ಕೂಡಲೇ ಕೇಂದ್ರ ಸರಕಾರ ಸಂಕಷ್ಟದಲ್ಲಿರುವ ಕಾರ್ಮಿಕರಿಗೆ ಸೂಕ್ತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.



ಕಟ್ಟಡ ಕಾರ್ಮಿಕರ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 20-11-2023ರಂದು ಮುಖ್ಯ ನಿರ್ವಾಹಣಾಧಿಕಾರಿ ಹಾಗೂ ಮಂಡಳಿಯ ಕಾರ್ಯದರ್ಶಿಗಳು ಕಾರ್ಮಿಕ ಸಚಿವರ ಆದೇಶದ ಮೇರೆಗೆ ಹಾವೇರಿ ಜಿಲ್ಲೆಯಲ್ಲಿ ನಕಲಿ ಕಾರ್ಡುಗಳ ತನಿಖೆ ನಡೆಸಲು ತನಿಕಾ ತಂಡವನ್ನು ರಚಿಸಿ ತನಿಖೆ ಮಾಡಲು ಆದೇಶ ಹೊರಡಿಸಿದ್ದಾರೆ. ಆದರೆ ಸದರಿ ಈ ಆದೇಶವನ್ನು ಖಂಡಿಸಿ ಹಾವೇರಿ ಜಿಲ್ಲೆಯಲ್ಲಿರುವ ಕಟ್ಟಡ ಕಾರ್ಮಿಕರ ಜಂಟಿ ಸಮಿತಿ ಹಾಗೂ ಕಾರ್ಮಿಕರ ಆಕ್ಷೇಪಣೆಯನ್ನು ಸಲ್ಲಿಸಲಾಗಿದೆ. ಸದ್ಯ ಡಿಸಿಯವರಿಂದ ಹಾಗೂ ಸರ್ಕಾರದಿಂದಾಗಲಿ ಕಟ್ಟಡ ಕಾರ್ಮಿಕರ ಮಂಡಳಿಯಿಂದಾಗಲಿ ಯಾವುದೇ ಪ್ರತ್ಯುತ್ತರ ಬಂದಿಲ್ಲ. ಆದ್ದರಿಂದ ಶೀಘ್ರವೇ ಹಾವೇರಿ ಜಿಲ್ಲಾ ಕಟ್ಟಡ ಕಾರ್ಮಿಕರ ವಿವಿಧ ಬೇಡಿಕೆ ಈಡೇರಿಸುವತ್ತ ಗಮನ ಹರಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಬೇಡಿಕೆಗಳು: ಕಟ್ಟಡ ಕಾರ್ಮಿಕರ ಎಲ್ಲಾ ಅರ್ಜಿಗಳನ್ನು ಸಲ್ಲಿಸಿದ ತಕ್ಷಣ ಅರ್ಜಿಗಳ ಸ್ಥಿತಿಗತಿ ತಿಳಿಯಲು ( ನರೇಗಾ ಮಾದರಿಯಂತೆ) ಸಾರ್ವಜನಿಕರಿಗೆ ತಂತ್ರಾಂಶದಿಂದ ಮಾಹತಿ ಪಡೆಯುವಂತೆ ಮಂಡಳಿಯ ತಂತ್ರಾಂಶದಲ್ಲಿ ಅಳವಡಿಸಬೇಕು, ಪೌರ ಕಾರ್ಮಿಕರ ಮಕ್ಕಳಿಗೆ 6 ರಿಂದ 12 ತರಗತಿಯವರೆಗೆ ವಿವಿಧ ವಸತಿ ಶಾಲೆಗಳಲ್ಲಿ ಶಿಕ್ಷಣ ಪಡೆಯಲು ಮೀಸಲು ಕಲ್ಪಿಸಿರುವಂತೆ ಕಟ್ಟಡ ಕಾರ್ಮಿಕರ ಮಕ್ಕಳಿಗೂ ಕೂಡಾ ಮೀಸಲಾತಿ ಕಲ್ಪಿಸಲಿಕ್ಕೆ ಕ್ರಮ ಕೈಗೊಳ್ಳಬೇಕು, ಹೆರಿಗೆ ಸಹಾಯಧನದ ಯೋಜನೆಯಲ್ಲಿ ಮಂಜೂರಾದ ಫಲಾನುಭವಿಗಳಿಗೆ ಬಾಂಡ ಕೊಡುವುದನ್ನು ಕೈಬಿಟ್ಟು 39 ನೇ ಮಂಡಳಿಯ ಸಭೆಯಲ್ಲಿ ವಿಷಯ ನಂಬರ 14 ರಲ್ಲಿ ನಿರ್ಣಯಿಸಿದಂತೆ ಫಲಾನಿಭವಿಯ ಖಾತೆಗೆ ಹಣ ಜಮೆ ಮಾಡುಲು ಕೂಡಲೇ ಕ್ರಮ ಕೈಗೊಳ್ಳಬೇಕು, ಗೃಹ ಬಾಗ್ಯ ಯೋಜನೆಯಡಿಯಲ್ಲಿರುವ ಕಾನೂನುನ್ನು ಸರಳೀಕರಣಗೊಳಿಸಿ ಎಲ್ಲಾ ಗ್ರಾಮೀಣ ಕಟ್ಟಡ ಕಾರ್ಮಿಕರಿಗೆ ದೊರಕುವಂತೆ (5,00,000) ಐದು ಲಕ್ಷ ರೂಗಳನ್ನು ಉಚಿತವಾಗಿ ಕೊಡಬೇಕು ಹಾಗೂ (5,00,000) ಐದು ಲಕ್ಷ ರೂಗಳನ್ನು ಶೂನ್ಯ ಬಡ್ಡಿದರದಲ್ಲಿ ಕೊಡಲು ಕ್ರಮ ಕೈಗೊಳ್ಳಬೇಕು, ಕರ್ನಾಟಕ ಕಟ್ಟಡ ಕಾರ್ಮಿಕರ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮಾದರಿಯಲ್ಲಿ ಕಟ್ಟಡ ಕಾರ್ಮಿಕರ ಸಮಸ್ಯೆಗಳನ್ನು ಚರ್ಚಿಸಲು ಪ್ರತಿ ಜಿಲ್ಲೆಗೆ ಸಮೀತಿ ರಚಿಸಬೇಕು, ಹಾನಗಲ್ಲ ತಾಲೂಕಿನಲ್ಲಿ ಕಟ್ಟಡ ಕಾರ್ಮಿಕರ ಅನುಕೂಲಕ್ಕಾಗಿ ಮತ್ತು ಮದುವೆ ಕಾರ್ಯಕ್ರಮ ಮತ್ತು ಕಟ್ಟಡ-ಕಾರ್ಮಿಕರ ಸಮವೇಶ ನಡೆಸಲಿಕೆ ಅನುಕೂಲವಾಗುವಂತೆ 10 ಎಕರೆ ಜಮೀನ ಮಂಜೂರು ಮಾಡಿ ಸಮಾವೇಕರ ಭವನವನ್ನು ನಿರ್ಮಿಸಲಿಕ್ಕೆ ಕ್ರಮ ಕೈಗೊಳ್ಳಬೇಕು, ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಧನಸಹಾಯದ ಅರ್ಜಿಗಳನ್ನು ಸಲ್ಲಿಸುವ ಸಂದರ್ಭದಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಘಗಳ ಉದ್ಯೋಗ ಪ್ರಮಾಣ ಪತ್ರವನ್ನು ಕಡ್ಡಾಯಗೊಳಿಸಬೇಕು, ಹೆಚ್ ಎಮ್ ಎಸ್ (H MS) ಸಂಯೋಜಿತ ಸಂಘಗಳು ಹಾವೇರಿ ಇವರಿಗೆ ಕಛೇರಿಯ ನಿರ್ವಹಣೆಮಾಡಿಕೊಳ್ಳಲು ಹಾವೇರಿ ಜಿಲ್ಲೆಯಲ್ಲಿ ಕಾರ್ಯ ಚಟುವಟಿಕೆಗಳು ನಡೆಯದೆ ಖಾಲಿ ಇರುವ ಸರಕಾರಿ ಕಛೇರಿಗಳನ್ನು ಉಚಿತವಾಗಿ ನೀಡಬೇಕು, ಅಖಿಲ ಕರ್ನಾಟಕ ಕಟ್ಟಡ ಕಾರ್ಮಿಕರ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘ (ರಿ ) ಮಾಸನಕಟ್ಟಿ ಜಿಲ್ಲಾ ಘಟಕ ಧಾರವಾಡ ಸಂಘಕ್ಕೆ ಸಂಘದ ಕೆಲಸ ಕಾರ್ಯಗಳಿಗೆ ಕಛೇರಿ ಮಾಡಲಿಕ್ಕೆ ಖಾಲಿ ಇರುವ ಸರಕಾರಿ ಕಛೇರಿಗಳನ್ನು ಉಚಿತವಾಗಿ ಕೊಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ಸಂಘದ ಹಾವೇರಿ ಜಿಲ್ಲಾಧ್ಯಕ್ಷ ಡಿ.ಎಸ್. ಓಲೇಕರ, ಪ್ರಕಾಶ ದಾನಪ್ಪನವರ, ರಾಚಯ್ಯ ಹಿರೇಮಠ, ನಂದಾ ಕಳಸದ, ಮಾನಪ್ಪ ಬಡಿಗೇರ, ನಿಂಗಪ್ಪ ಕಮ್ಮಾರ, ಶೋಭಾ ಮುದೇನೂರ, ನಿಂಗಪ್ಪ ಕಮ್ಮಾರ ಸೇರಿದಂತೆ ಇತರರು ಭಾಗವಹಿಸಿದ್ದರು.

# 3 ಕೃಷಿ ಕಾಯ್ದೆ ವಾಪಾಸ ಪಡೆಯುವಂತೆ ಆಗ್ರಹಿಸಿ ರೈತರಿಂದ ಪ್ರತಿಭಟನೆ

## ಕಬ್ಬಿನ ತೂಕದಲ್ಲಿ ಗೋಲಮಾಲ; ಕ್ರಮಕ್ಕೆ ರೈತರಿಂದ ಆಗ್ರಹ; 25 ಸಂಸದರು ಕೇಂದ್ರ ಕೈಗೊಂಬೆ ಎಂದು ಘೋಷಣೆ ಕೂಗಿದ ಪ್ರತಿಭಟನಾಕಾರರು

ಬೆಳಗಾವಿ: ರೈತರಿಗೆ ಮಾರಕವಾಗುವಂತಹ 3 ಕೃಷಿ ಕಾಯ್ದೆಗಳನ್ನು ವಾಪಾಸ ಪಡೆಯುವಂತೆ ಆಗ್ರಹಿಸಿ ಅಖಿಲ ಕರ್ನಾಟಕ ರೈತ ಸಂಘಟನೆಯಿಂದ ಸುವರ್ಣಸೌಧ ಬಳಿ ಪ್ರತಿಭಟನೆ ನಡೆಸಲಾಯಿತು.

ರೈತ ಸಂಘಗಳ ಹೋರಾಟದ ಫಲವಾಗಿ ಕೇಂದ್ರ ಸರ್ಕಾರ 3 ಕೃಷಿ ಕಾಯ್ದೆಗಳನ್ನು ವಾಪಾಸ ಪಡೆದಿದೆ. ಈಗ ರಾಜ್ಯ ಸರ್ಕಾರ ರೈತರಿಗೆ ಮಾರಕವಾಗುವಂತಹ 3 ಕೃಷಿ ಕಾಯ್ದೆಗಳನ್ನು ವಾಪಾಸ ಪಡೆಯಬೇಕು. ಹಾಗೂ ರಾಜ್ಯ ಸರ್ಕಾರ ರೈತರ ಕೃಷಿ ಪಂಪಸೆಟ್ ಗಳಿಗೆ ವಿದ್ಯುತ್ ಪಡೆಯಲು ನೂತನ ಕಾಯ್ದೆ ಜಾರಿಗೆ ತಂದಿದೆ.

ರೈತರ ಗಾಯದ ಮೇಲೆ ಬರೆ ಎಳೆದ ಸರ್ಕಾರ: ರೈತರಿಂದ ಆಕ್ರೋಶ

ಈ ಕಾಯ್ದೆಯಿಂದ ಅಕ್ರಮ ಸಕ್ರಮದಲ್ಲಿ ಈ ಹಿಂದೆ 25 ರ ಟ್ರಾನ್ಸಫಾರ್ಮಗೆ (ಟಿಸಿ) ಒಬ್ಬ ರೈತರು ಒಂದು ಬೋರವೆಲಗೆ ವಿದ್ಯುತ್ ಪಡೆಯಲು ಅಕ್ರಮ ಸಕ್ರಮದಲ್ಲಿ 24 ಸಾವಿರ ಶುಲ್ಕ ತುಂಬಿದರೆ ವಿದ್ಯುತ್ ಕಂಬ, ತಂತಿ, ಎಲ್ಲಾ ಸೌಲಭ್ಯ ಸಿಗುತ್ತಿತ್ತು.

ಹೊಸ ಕಾಯ್ದೆಯಿಂದ 25 ರ ತಟಿಸಿಗೆ ಒಟ್ಟಾರೆ ಎಲ್ಲಾ ಪರಿಕರಗಳಿಂದ 65-70 ಸಾವಿರ ಖರ್ಚು ಬರುತ್ತದೆ. ಈಗಾಗಲೆ ರೈತರು ಬರಗಾಲದಿಂದ ಕಂಗಾಲಾಗಿದ್ದಾರೆ. ಈ ಕಾಯ್ದೆಯಿಂದ ಗಾಯದ ಮೇಲೆ ಬರೆ ಎಳೆದಂತಾಗಿದೆ ಆಕ್ರೋಶ ವ್ಯಕ್ತಪಡಿಸಿದರು.

ಹೊಸ ಕಾಯ್ದೆ ರದ್ದು ಪಡಿಸಬೇಕು. ಹಳೆ ಕಾಯ್ದೆ ಜಾರಿಗೆ ತರಬೇಕು. ನಿರಂತರವಾಗಿ ದಿನನಿತ್ಯ ಹಗಲು ಹೊತ್ತಿನಲ್ಲಿ ರೈತರ ಕೃಷಿ ಪಂಪಸೆಟಗಳಿಗೆ 8 ತಾಸು ವಿದ್ಯುತ್ ನೀಡಬೇಕು. 2) ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕು ಕಕ್ಕೇರಿ ಸಮೀಪದ ಸುರಪುರ ಕೆರವಾಡ(ಹಿಡಕಲ್) ಗ್ರಾಮವು ನಿರ್ಮಾಣವಾಗಿ 56 ವರ್ಷಗಳು ಕಳೆದರೂ ಈ ಗ್ರಾಮವನ್ನು ಕಂದಾಯ ಗ್ರಾಮವನ್ನಗಿ ನಮ್ಮನಾಳುವ ಸರಕಾರಗಳು ಮಾಡಿರುವುದಿಲ್ಲ. ಇಲ್ಲಿನ ನಿವಾಸಿಗಳಿಗೆ ಸರ್ಕಾರದ ಸೌಲಭ್ಯ ವಂಚಿತರಾಗಿದ್ದಾರೆ. ಈ ಗ್ರಾಮಕ್ಕೆ

ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕು ಕಕ್ಕೇರಿ ಗ್ರಾಮದಲ್ಲಿ 12 ನೇ ಶತಮಾನದಲ್ಲಿ ಐತಿಹಾಸಿಕ ಬಿಷ್ಟಾದೇವಿಯ ಸಹೋದರಿಯ ಶ್ರೀ ಮೂಕಾಂಬಿಕಾದೇವಿ ದೇವಸ್ಥಾನವಿದ್ದು ಡೊಹರ ಕಕ್ಕಯ್ಯ ಏಕ್ಯವಾದ ಸ್ಥಳವಾಗಿದೆ. ಈ ಗ್ರಾಮವನ್ನು ಪ್ರವಾಸಿ ತಾಣವೆಂದು ಮಂಜೂರುಮಾಡಬೇಕು.

**ಖಾನಾಪುರ ತಾಲೂಕಿಗೆ ಕುಡಿಯಲು ನೀರಿನ ವ್ಯವಸ್ಥೆ ಕಲ್ಪಿಸುವಂತೆ ಮನವಿ**

ಸದರಿ ಗ್ರಾಮಕ್ಕೆ ಉಪ ಪೊಲೀಸ ಠಾಣೆ, 1968 ರಲ್ಲಿ ಆಸ್ಪತ್ರೆ ಪ್ರಾರಂಭವಾಗಿದ್ದು ಈಗ ಮೇಲ್ದರ್ಜೆಗೆ ಏರಿಸಿ 50 ಹಾಸಿಗೆಯುಳ್ಳ ಆಸ್ಪತ್ರೆಯಲ್ಲಿ ಅವಕಾಶ ಮಾಡಿಕೊಡಬೇಕು. ಈ ಗ್ರಾಮಕ್ಕೆ ಸರ್ಕಾರಿ ಕಾಲೇಜು, ಸರ್ಕಾರಿ ಪ್ರೌಢಶಾಲೆ ವಿಶೇಷವಾಗಿ ಮೈಸೂರು ಉತ್ಸವ ಹಾಗೂ ಕಿತ್ತೂರು ಉತ್ಸವದಂತೆ ಸ್ಥಾನಮಾನ ನೀಡಬೇಕು. ಸದರಿ ಗ್ರಾಮಕ್ಕೆ ಧಾರವಾಡದಿಂದ ಬರುವ ಭಕ್ತರಿಗೆ ವಿದ್ಯಾರ್ಥಿಗಳಿಗೆ ಬಸ್ಸುಗಳ ಅನುಕೂಲ ಕಲ್ಪಿಸಿಕೊಡಬೇಕು. ಮತ್ತು ಮಲಪ್ರಭಾ ನದಿ ಖಾನಾಪುರ ತಾಲ್ಲೂಕಿನಲ್ಲಿ ಹುಟ್ಟಿದೆ. ಆದರೆ ಖಾನಾಪುರ ತಾಲ್ಲೂಕಿನಲ್ಲಿ ಕುಡಿಯಲು ನೀರಿಲ್ಲ.



ಅದಕ್ಕೆ ಸರ್ಕಾರ ತಾಲ್ಲೂಕಿಗೆ ಕುಡಿಯುವ ನೀರು ಮತ್ತು ನೀರಾವರಿ ಯೋಜನೆಗೆ ಆಧ್ಯತೆ ನೀಡಬೇಕು ಮತ್ತು ಬಾಮದಾರ ನಿರ್ಮಾಣ ಮಾಡಬೇಕು ಸರ್ಕಾರಕ್ಕೆ ಆಗ್ರಹಿಸಿಸದರು.

ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಮಾನವ ದಿನಗಳು 100 ದಿನದಿಂದ 150 ದಿನಕ್ಕೆ ಹೆಚ್ಚಿಸಬೇಕು. ಒಬ್ಬ ಕಾರ್ಮಿಕರಿಗೆ 316 ದಿನಗೂಲಿ ಇರುತ್ತದೆ.

ಎಲ್ಲಾ ವಸ್ತು ಗಗನಕ್ಕೆ ಏರಿರುವುದರಿಂದ ಬರಗಾಲ ಇರುವುದರಿಂದ ದಿನಕ್ಕೆ 350 ರೂ ಕೂಲಿ ಕಾರ್ಮಿಕರಿಗೆ ನೀಡಬೇಕು. ಮತ್ತು ಸದರಿ ಕೆಲಸಕ್ಕೆ ಸಂಬಂಧ ಪಟ್ಟ ಅಂಗವಿಕಲರಿಗೆ ವೃದ್ಧರಿಗೆ, ಗರ್ಭಿಣಿಯರಿಗೆ ಯಾವುದೇ ಸೌಲಭ್ಯ ಕೊಡುವುದಿಲ್ಲ. ಸಮಯಕ್ಕೆ ಸರಿಯಾಗಿ ಕಾರ್ಮಿಕರಿಗೆ ರಾಜ್ಯದಲ್ಲಿ ಅನೇಕ ಗ್ರಾಮ ಪಂಚಾಯತನವರು ಕೆಲಸ ನೀಡದೆ ಜೆಸಿಬಿ ಯಂತ್ರಗಳಿಂದ ಕೆಲಸ ಮಾಡುತ್ತಾರೆ. ನ್ಯಾಯಯುತವಾಗಿ ಕಾರ್ಮಿಕರಿಗೆ ಎಲ್ಲಾ ಸೌಲಭ್ಯ ಸಿಗುವಂತೆ ಕಡಕ್ ಆಗಿ ಆದೇಶ ಮಾಡಬೇಕು. ಕಟ್ಟಡ ಕಾರ್ಮಿಕರಿಗೆ ಸಿಗುವ ಎಲ್ಲಾ ಸೌಲಭ್ಯಗಳು ಕೃಷಿ ಕಾರ್ಮಿಕರಿಗೂ ನರೇಗಾ ಕಾರ್ಮಿಕರಿಗೂ ದೊರಕಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

**ಕಬ್ಬಿನ ತೂಕದಲ್ಲಿ ಗೋಲಮಾಲ ; ಕ್ರಮಕ್ಕೆ ರೈತರಿಂದ ಆಗ್ರಹ**

ರಾಜ್ಯದ ರೈತರು ಕಬ್ಬು ಬೆಳೆದು ಕಾರ್ಖಾನೆಗೆ ಸಾಗಿಸಿದಾಗ ತೂಕದಲ್ಲಿ ಏರು ಪೇರು ಮಾಡಿ ರೈತರಿಗೆ ಅನ್ಯಾಯ ಮಾಡುತ್ತಾರೆ. ಸರಿಯಗಿ ವೇ ಬ್ರಿಡ್ಜ್ ಕಾಟಾ ಆಗಬೇಕು. ಕಬ್ಬಿನ ಕಟಾವು ಟ್ರಾನ್ಸಪೋರ್ಟ ಖರ್ಚು ಇತರೆ ಖರ್ಚು ಹೆಚ್ಚಾಗಿರುವುದರಿಂದ 1 ಟನ್ ಕಬ್ಬಿಗೆ 4500 ರೂ ನೀಡಬೇಕು.

ರಾಜ್ಯದಲ್ಲಿ 236 ತಾಲ್ಲೂಕುಗಳ ಪೈಕಿ 223 ತಾಲ್ಲೂಕ ಬರಪೀಡಿತ ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿದೆ. 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೈತರ ಬೆಳೆ ನಷ್ಟವಾಗಿದೆ. ಕೇಂದ್ರದಿಂದ ಅಧಿಕಾರಿಗಳ ತಂಡ ರಾಜ್ಯಕ್ಕೆ ಆಗಮಿಸಿ ಅಕ್ಟೋಬರ್ ತಿಂಗಳಲ್ಲಿ ಬೆಳೆ ನಷ್ಟ ಪರಿಶೀಲನೆ ಮಾಡಿತು. ಇದುವರೆಗೂ ಕೇಂದ್ರ ಸರ್ಕಾರ ಉನ್ನತ ಮಟ್ಟದ ಅಧಿಕಾರಿಗಳ ಸಭೆ ನಡೆಸಿಲ್ಲ.

ರಾಜ್ಯದ 24 ಸಂಸದರು ತುಟಿ ಪಟಕ್ ಎನ್ನದೆ ಇರುವುದು ಖಂಡನೀಯ. ಕೇಂದ್ರ ಸರ್ಕಾರ ನಾವು ನಮ್ಮ ರಾಜ್ಯದಿಂದ ಜಿಎಸ್ ಟಿ ಹಣವನ್ನು ಬಿಡಿಗಾಸು ನಮ್ಮ ರಾಜ್ಯಕ್ಕೆ ನೀಡಿಲ್ಲ. ತಕ್ಷಣ ಕೇಂದ್ರ ಸರ್ಕಾರ ರಾಜ್ಯ ಸರ್ಕಾರ ಬೆಳೆ ನಷ್ಟ ಪರಿಹಾರ ನೀಡಬೇಕು. ರಾಜ್ಯದಲ್ಲಿ ಬೆಳೆ ವಿಮೆ ತುಂಬಿದ ರೈತರಿಗೆ ಬೆಳೆವಿಮೆ ನೀಡಬೇಕು.

25 ಸಂಸದರು ಕೇಂದ್ರ ಕೈಗೊಂಬೆ ಎಂದು ಘೋಷಣೆ ಕೂಗಿದ ಪ್ರತಿಭಟನಾಕಾರರು ರಾಜ್ಯದಲ್ಲಿ ಭೀಕರ ಬರಗಾಲ ಆವರಿಸಿದೆ. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರು ಹಾಗೂ ಸಹಕಾರ ಸಂಘಗಳಲ್ಲಿ ರೈತರು ಬೆಳೆ ಸಾಲವನ್ನು ಪಡೆದು ಸಾಲ ಕಟ್ಟಲು ಸಾಧ್ಯವಾಗಿಲ್ಲ. ಸಾಲ ಮನ್ನಾ ಮಾಡಬೇಕು. ರಾಜ್ಯದಲ್ಲಿ ಕೆಲವೊಂದು ರಾಷ್ಟ್ರೀಕೃತ ಬ್ಯಾಂಕುಗಳು ರೈತರಿಗೆ ಸಾಲ ಕಟ್ಟುವಂತೆ ರೈತರಿಗೆ ನೋಟೀಸು ಜಾರಿ ಮಾಡುತ್ತಿವೆ.

ಇದು ಖಂಡನೀಯ. ಅಧಿಕಾರಿಗಳ ಕಿರುಕುಳದಿಂದ ರೈತ ಮೃತ ಪಟ್ಟಿದ್ದಾನೆ. ಬರಗಾಲದಿಂದ ಸಮಸ್ಯೆ ಎದುರುಸುತ್ತಿರುವ ರೈತರಿಗೆ ಬೆಳೆ ಸಾಲ, ರೈತರ ಸಾಲಕ್ಕೆ ಸರ್ಕಾರದ ಹಣವನ್ನು ಜಮಾ ಮಾಡದಂತೆ ಸರ್ಕಾರ ಆದೇಶ ಮಾಡಿಸಬೇಕು. ತಪ್ಪು ಮಾಡಿದ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು.

**ಬೆಣ್ಣೆಹಳ್ಳಕ್ಕೆ ಕಿಲೋ ಮೀಟರ್ ಒಂದಕ್ಕೆ ಚೆಕ್ ಡ್ಯಾಂ ನಿರ್ಮಿಸಿ**

ಧಾರವಾಡ ಜಿಲ್ಲೆ ನವಲಗುಂದ ತಾಲ್ಲೂಕಿನಲ್ಲಿ ಬೆಣ್ಣೆಹಳ್ಳದಿಂದ ಮಳೆಗಾಲದಲ್ಲಿ ಮಳೆ ಆದಾಗ 9 ಟಿಎಂಸಿ ನೀರು ಪ್ರತಿ ವರ್ಷ ಪೋಲಾಗುತ್ತದೆ. ಬೆಣ್ಣೆಹಳ್ಳಕ್ಕೆ ಕಿಲೋ ಮೀಟರ್ ಒಂದಕ್ಕೆ ಚೆಕ್ ಡ್ಯಾಂ ನಿರ್ಮಿಸಬೇಕು.

ಕಳಸಾ ಬಂಡೂರಿ ನಾಲಾ ಕಾಮಗಾರಿಯೂ ಆದಷ್ಟು ಬೇಗನೇ ಪ್ರಾರಂಭಿಸಬೇಕು. ರಾಜ್ಯದಲ್ಲಿ ಏತ ನೀರಾವರಿ ನೆನೆಗುದಿಗೆ ಬಿದ್ದಿರುವ ಕಾಮಗಾರಿಯನ್ನು ಕೈಗೆ ಎತ್ತಿಕೊಳ್ಳಬೇಕು. ಸದರಿ ಜಿಲ್ಲೆಯ ಅಣ್ಣಿಗೇರಿ ತಾಲ್ಲೂಕು ಕೇಂದ್ರಗಳಲ್ಲರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಬೇಕು. ಅಣ್ಣಿಗೇರಿ ಪುರಸಭೆಯ ಹೆಚ್ಚಿನ ಅಭಿವೃದ್ಧಿಯಾಗಬೇಕು.

ಈ ಸಂದರ್ಭದಲ್ಲಿ ಮಹಾದೇವಿ ಹುಯಿಲಗೋಳ, ಕೀಶೂರ ಮಿಠಾರಿ , ಶಂಕರಗೌಡ ಪಾಟೀಲ, ಶಂಕರಪ್ಪ ಆಚಾರಿ, ಶಿವಪುತ್ರಪ್ಪ ಕಣಗಿ, ಕೃಷ್ಣನಾಯ್ಕ ನಾಯ್ಕರ, ಬಸನಗೌಡ ಪಾಟೀಲ, ಚಂದ್ರಪ್ಪ ಮಾನೇರ, ಫಕ್ಕಿರೇಶ ಕಾಳಿ, ಹನುಮಂತಪ್ಪ ಕರಿಯಣ್ಣನವರ, ಶೀವಕುಮಾರ ವಾಲ್ಮೀಕಿ ಹಾಗೂ ಇತರರು ಇದ್ದರು.

# ನವ ಭಾರತದಲ್ಲಿ ಒಂದೇ ಚಿಹ್ನೆ, ಒಂದೇ ಸಂವಿಧಾನ ಮತ್ತು ಒಬ್ಬನೇ ನಾಯಕನ ಕನಸು ನನಸಾಗಿದೆ: ಅಮಿತ್ ಶಾ

ದೀರ್ಘಕಾಲದವರೆಗೆ ಜಮ್ಮು ಮತ್ತು ಕಾಶ್ಮೀರದಿಂದ ಆರ್ಟಿಕಲ್ 370 ಮತ್ತು 35 ಎ ಅನ್ನು ರದ್ದುಗೊಳಿಸಲು ದೇಶದೆಲ್ಲೆಡೆ ಧ್ವನಿ ಮೊಳಗುತ್ತಿತ್ತು, ಆದರೆ ಪ್ರತಿ ಬಾರಿ ಕಾಂಗ್ರೆಸ್ ಈ ಬೇಡಿಕೆಯನ್ನು ಸಾರಾಸಗಟಾಗಿ ತಿರಸ್ಕರಿಸುತ್ತಿತು ಮತ್ತು ಅದರ ಬಗ್ಗೆ ಮಾತನಾಡಲು ಸಹ ನಿರಾಕರಿಸುತ್ತಿತು.

ಕಾಂಗ್ರೆಸ್ ತನ್ನ ಸ್ವಾರ್ಥಕ್ಕಾಗಿ ಜಮ್ಮು ಮತ್ತು ಕಾಶ್ಮೀರದ ಜನರನ್ನು ಕತ್ತಲೆಯಲ್ಲಿಟ್ಟು ತನ್ನ ರಾಜಕೀಯ ಲಾಭ ಗಳಿಸುವ ಕೆಲಸ ಮಾಡಿದೆ.

ದೇಶದ ಸ್ವಾತಂತ್ರ್ಯದ ನಂತರ, ಕಾಂಗ್ರೆಸ್ ಸರ್ಕಾರವು ದೀರ್ಘಕಾಲ ಅಧಿಕಾರದಲ್ಲಿತ್ತು ಆದರೆ ಜಮ್ಮು ಮತ್ತು ಕಾಶ್ಮೀರದಿಂದ 370 ನೇ ವಿಧಿಯನ್ನು ರದ್ದುಗೊಳಿಸುವ ಯಾವುದೇ ಪ್ರಯತ್ನವನ್ನು ಮಾಡಲಿಲ್ಲ.

ಕಾಂಗ್ರೆಸ್ ಆಡಳಿತದ ಅವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರ ರಾಜ್ಯದ ಬಗ್ಗೆ ಒಂದು ಸತ್ಯ ಮಾತ್ರ ಸ್ಪಷ್ಟವಾಗಿ ಗೋಚರವಾಗುತ್ತಿತ್ತು – ಅದು ವ್ಯಾಪಕವಾದ ಅಶಾಂತಿ, ಭಯೋತ್ಪಾದಕ ಘಟನೆಗಳು, ಕಲ್ಲು ತೂರಾಟ, ಜಿಹಾದಿ ಗಲಭೆಗಳು ಮತ್ತು ಮುಗ್ಧ ಜನರ ವೇದನೆಗಳು ಈ ಪ್ರದೇಶವನ್ನು ಪೀಡಿತಗೊಳಿಸಿದ್ದವು.

ರಾಷ್ಟ್ರದ ಅವಿಭಾಜ್ಯ ಅಂಗವಾಗಿದ್ದರೂ, ಜಮ್ಮು ಮತ್ತು ಕಾಶ್ಮೀರವು ತನ್ನ ಧ್ವಜ, ಸಂವಿಧಾನ ಮತ್ತು ಪ್ರತ್ಯೇಕ ಸರ್ಕಾರವನ್ನು ಹೊಂದಿತ್ತು.

ಇದಕ್ಕೆ ವ್ಯತಿರಿಕ್ತವಾಗಿ, ಮೋದಿ ಸರ್ಕಾರದ ನಾಯಕತ್ವದಲ್ಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ರೂಪಾಂತರಗೊಂಡ ಹೊಸ ನಿರೂಪಣೆಯು ತೆರೆದುಕೊಂಡಿತು. ಅಧಿಕಾರಕ್ಕೆ ಬರುವ



ಮೊದಲು, ಮೋದಿ ಸರ್ಕಾರವು ದೇಶದೊಳಗಿನ 2 ಚಿಹ್ನೆಗಳು, 2 ಸಂವಿಧಾನಗಳು ಮತ್ತು 2 ನಾಯಕರನ್ನು ತೊಡೆದುಹಾಕಲು ಪ್ರತಿಜ್ಞೆ ಮಾಡಿತು ಮತ್ತು ಆ ಭರವಸೆಯನ್ನು ಯಶಸ್ವಿಯಾಗಿ ಪೂರೈಸಿತು.

ಆಗಸ್ಟ್ 5, 2019 ರಂದು, ಮೋದಿ ಮತ್ತು ಅಮಿತ್ ಶಾ ಅವರ ಜಾಣ್ಮೆಯ ಮಾರ್ಗದರ್ಶನದಲ್ಲಿ, ಜಮ್ಮು ಮತ್ತು ಕಾಶ್ಮೀರವನ್ನು ಭಾರತದ ಜೊತೆಗೆ ದೃಢವಾಗಿ ಏಕೀಕರಿಸುವ, 370 ಮತ್ತು 35A ವಿಧಿಗಳನ್ನು ಶಾಶ್ವತವಾಗಿ ರದ್ದುಗೊಳಿಸುವ ಐತಿಹಾಸಿಕ ನಿರ್ಧಾರವನ್ನು ತೆಗೆದುಕೊಳ್ಳಲಾಯಿತು.

ಮಂಗಳವಾರದಂದು, ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ, ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಲೋಕಸಭೆಯಲ್ಲಿ ಮಾತನಾಡುತ್ತಾ, ಮೋದಿ ಸರ್ಕಾರ ಒಂದೇ ಚಿಹ್ನೆ, ಒಂದೇ ಸಂವಿಧಾನ ಮತ್ತು ಒಬ್ಬನೇ ನಾಯಕನ ಕನಸನ್ನು ನನಸಾಗಿಸಿದೆ ಎಂದರು.

70 ವರ್ಷಗಳಿಂದ ಬಿಜೆಪಿ ಈ ಘೋಷಣೆಯೊಂದಿಗೆ ನಡೆಯುತ್ತಿದ್ದು, ಮೋದಿ–ಶಾ ಜೋಡಿ ಈ ಘೋಷಣೆಯನ್ನು ನಿಜವಾಗಿಸಿದೆ.

ಆರ್ಟಿಕಲ್ 370 ಮತ್ತು 35J ರದ್ದತಿಯ ನಂತರ, ಜಮ್ಮು ಮತ್ತು ಕಾಶ್ಮೀರವು ಅಭಿವೃದ್ಧಿಯ ಹೊಸ ಪರ್ವದತ್ತ ಸಾಗುತ್ತಿದೆ. ಪ್ರವಾಸೋದ್ಯಮ ಹೆಚ್ಚುತ್ತಿದೆ, ಭಯೋತ್ಪಾದಕ ಘಟನೆಗಳು ಕಡಿಮೆಯಾಗಿವೆ ಮತ್ತು ಕಲ್ಲು ತೂರಾಟದ ನಿದರ್ಶನಗಳು ತುಂಬಾ ವಿರಳವಾಗಿವೆ.

ಜಮ್ಮು ಮತ್ತು ಕಾಶ್ಮೀರದ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಸತತವಾಗಿ ಬಜೆಟ್‌ಗಳನ್ನು ಮೀಸಲಿಡುತ್ತಿದೆ.

ಒಂದು ಕಾಲದಲ್ಲಿ ಭಯೋತ್ಪಾದಕ ಚಟುವಟಿಕೆಗಳ ಕೇಂದ್ರವೆಂದು ಪರಿಗಣಿಸಲ್ಪಟ್ಟಿದ್ದ ಈ ಪ್ರದೇಶ ಈಗ ಶಾಂತಿಯ ವಾತಾವರಣವನ್ನು ಹೊರಸೂಸುತ್ತದೆ.

ಈ ರೂಪಾಂತರಗಳನ್ನು ಪರಿಗಣಿಸಿ, ಪ್ರಧಾನಿ ಮೋದಿಯವರ ಅಧಿಕಾರಾವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರದ ಭೂದೃಶ್ಯವು ಸಂಪೂರ್ಣವಾಗಿ ರೂಪಾಂತರಕ್ಕೆ ಒಳಗಾಗಿದೆ ಎಂದು ಪ್ರತಿಪಾದಿಸುವುದು ನಿಖರವಾಗಿದೆ.

# ಸಿಪಿಆರ್ ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮ



ಬೆಳಗಾವಿ: ಸಿಪಿಆರ್ ಜೀವರಕ್ಷಣೆಯ ಕಲೆ ಯಾಗಿದೆ. ಇದನ್ನು ಅರಿತರೆ ನಾವಷ್ಟೇ ಅಲ್ಲದೇ ನಮ್ಮ ಸುತ್ತಮುತ್ತಲಿನ ಜನರ ಆರೋಗ್ಯದ ಹಿತದೃಷ್ಟಿಯನ್ನು ಕಾಯುವಲ್ಲಿ ಅತ್ಯುತ್ತಮವಾದ ಪಾತ್ರವನ್ನು ನಿರ್ವಹಿಸುತ್ತದೆಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ. ಎಸ್ ಸಿ ಧಾರವಾಡಅವರು ಮಾತನಾಡುತ್ತಿದ್ದರು. ಅವರು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಚರಕ ಸಭಾಂಗಣದಲ್ಲಿ "ನ್ಯಾಷನಲ ಬೋರ್ಡಆಫ್ ಎಕ್ಸಾಮಿನೇಷನ್ ಇನ್ ಮೆಡಿಕಲ್ ಎಕ್ಸಾಮಿನೇಷನ್" ಅವರ ನಿರ್ದೇಶನದಲ್ಲಿ ನಡೆದ ಇಂಟರ್ನೆಟ ಸ್ಟ್ರೀಮಿಂಗ ಕಾರ್ಯಕ್ರಮದ ಅಂಗವಾಗಿ ಮಾತನಾಡುತ್ತಿದ್ದರು.

ಆಸ್ಪತ್ರೆಯ ಮೂತ್ರಶಾಸ್ತ್ರ ವಿಭಾಗದ ಹೆಸರಾಂತ ವೈದ್ಯಡಾ.ಶಿಶಿರ ದೇವರಾಜು ಅವರು ಹಾಗೂ ಚಿಕ್ಕಮಕ್ಕಳ ವಿಬಾಗದ ಮುಖ್ಯಸ್ಥರಾದ ಡಾ.ಎಮ್ ಎಸ್‌ಕಡ್ಡಿ ಇವರ ಮುತುವರ್ಜಿಯಲ್ಲಿ ಈ ಕಾರ್ಯಕ್ರಮ ನಡೆಯಿತು. ನಮ್ಮ ಆಸ್ಪತ್ರೆಯು ಈಗಾಗಲೆ ಬಿಎಲ್‌ಎಸ್ ಸಿಪಿಆರ್ ತರಬೇತಿಕೇಂದ್ರವಾಗಿ ಮಾನ್ಯತೆಯನ್ನು ಪಡೆದಿದ್ದು 27 ಕಾರ್ಯಕ್ರಮಗಳ ಮೂಲಕ ಸಾವಿರಾರು ಜನರಿಗೆ ತುರ್ತು ಸಂದರ್ಭಗಳಲ್ಲಿ ಜೀವರಕ್ಷಣಾ ಕಲೆಗಳನ್ನು ನಾಗರಿಕರಿಗೆ, ಪೋಲಿಸ್ ಸಿಬ್ಬಂದಿಗೆ, ವೈದ್ಯಕೀಯ ವಿದ್ಯಾರ್ಥಿಗಳಿಗೆ ಹಾಗೂ ಶುಷ್ರೂಷಕಿಪ್ರಶಿಕ್ಷಣಾರ್ತಿಗಳಿಗೆ ತರಭೇತಿಯನ್ನು ನೀಡಿದೆ.

ಇನ್ನು ಮುಂದೆಯೂ ಇಂತಹ ಕಾರ್ಯಕ್ರಮಗಳ ಮೂಲಕ ನಾಗರಿಕರಿಗೆ ಆರೋಗ್ಯದ ಅರಿವು ಮೂಡಿಸುವಲ್ಲಿ ನಮ್ಮ ಸಂಸ್ಥೆಯು ಮುಂಚೂಣಿಯಲ್ಲಿರುತ್ತದೆ ಎಂದು ಆಸ್ಪತ್ರೆಯ ನಿರ್ದೇಶಕರಾದ ಡಾ. ಎಸ್ ಸಿ ಧಾರವಾಡ ಅವರು ಅಭಿಮತ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಸುಮಾರು 140 ಕ್ಕೂ ಅಧಿಕ ನಾಗರಿಕರು, ಆಸ್ಪತ್ರೆಯ ವೈದ್ಯಕೀಯೇತರ ಸಿಬ್ಬಂದಿ, ನರ್ಸಿಂಗ ವಿದ್ಯಾರ್ಥಿಗಳು, ವೈದ್ಯ ವಿದ್ಯಾರ್ಥಿಗಳು ಹಾಗೂ ವೈದ್ಯರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಚಿಕ್ಕಮಕ್ಕಳ ವೈದ್ಯರಾದ.ಡಾ. ಸಂತೋಷ ಕುಮಾರ ಕರಮಸಿ, ಡಾ.ಬಸವರಾಜ ಕುಡಸೋಮಣ್ಣವರ, ಡಾ.ಯೋಗೇಶ ರಾವಳ ಹಾಗೂ ಡಾ.ಸೌಮ್ಯಾ ವೇರ್ಣೇಕರ ಅವರು ಪ್ರಾಯೋಗಿಕ ತರಬೇತಿ ನೀಡಿದರು. ಡಾ. ಶಿಶಿರ ದೇವರಾಜು ಅವರು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

## ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿನ ಶೈಕ್ಷಣಿಕ ವರ್ಷದ 2 ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸುವ ದಿನಾಂಕವನ್ನು ಡಿಸೆಂಬರ್ 11, 2023 ರವರೆಗೆ ವಿಸ್ತರಿಸಲಾಗಿದೆ ಎಂದು ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳಾ ಸ್ವಸಹಾಯ ಗುಂಪುಗಳ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ

ಬೆಳಗಾವಿ: ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಅಭಿಯಾನ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಬೆಳಗಾವಿ ಮಹಾನಗರ ಪಾಲಿಕೆ ಇವರ ಸಹಯೋಗದೊಂದಿಗೆ ಬೆಳಗಾವಿಯಲ್ಲಿ ಚಳಿಗಾಲದ ಉಭಯ ಸದನಗಳ ಅಧಿವೇಶನದ ನಿಮಿತ್ತವಾಗಿ ಡಿ.7 ರಿಂದ ಡಿ.13 ರವರೆಗೆ ನಗರದ ಸರ್ದಾರ್ ಹೈಸ್ಕೂಲ್ ಮೈದಾನದಲ್ಲಿ ಮಹಿಳಾ ಸ್ವಸಹಾಯ ಗುಂಪುಗಳ ಉತ್ಪನ್ನಗಳ ಬೃಹತ್ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಆಯೋಜಿಸಲಾಗಿದೆ.

ರಾಜ್ಯಮಟ್ಟದ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಡಿ.7 ರಂದು ಮಧ್ಯಾಹ್ನ 3.30 ಗಂಟೆಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ.

ಉಪಮುಖ್ಯಮಂತ್ರಿಗಳಾದ ಡಿ. ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಆರ್. ಹೆಬ್ಬಾಳಕರ್, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಶರಣಪ್ರಕಾಶ್ ರು. ಪಾಟೀಲ ಇವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶಾಸಕರಾದ ಆಸೀಫ್ ಸೇಟ್ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ್ ಮ. ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ್ ಹುಕ್ಕೇರಿ ವಿಶೇಷ ಆಮಂತ್ರಿತರಿದ್ದಾರೆ.

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ರಜನಿಶ್ ಗೋಯಲ್, ಅಪರ ಮುಖ್ಯ ಕಾರ್ಯದರ್ಶಿಗಳಾದ ಶಾಲಿನಿ ರಜನೀಶ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಉಮ ಮಹಾದೇವನ್, ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಅಂಜುಂ ಪರ್ವೇಜ್, ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತರು ಆದ ಸಂಜಯ್ ಬಿ. ಶೆಟ್ಟೆಣ್ಣವರ, ಪೋಲಿಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರ್ ವಿಕಾಶ್, ರಾಷ್ಟ್ರೀಯ ಜೀವನೋಪಾಯ ಅಭಿಯಾನ ನಿರ್ದೇಶಕರಾದ ಪಿ. ಐ. ಶ್ರೀವಿದ್ಯಾ, ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ್, ಪೊಲೀಸ್ ಆಯುಕ್ತರಾದ ಎಸ್. ಏನ್. ಸಿದ್ದರಾಮಪ್ಪ, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿಗಳಾದ ಭೀಮಾಶಂಕರ್ ಎಸ್. ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಬೋಯರ್, ಮಹಾನಗರ ಪಾಲಿಕೆ ಆಯುಕ್ತನದ ಅಶೋಕ್ ದುಡುಗುಂಟಿ ಹಾಗೂ ಮತ್ತಿತರರು ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸಮಾಜದ ತುಳಿತ್ತಕ್ಕೆ ಒಳಗಾದವರನ್ನು ಮೇಲೆತ್ತಿದವರು ಶಿವಬಸವ ಸ್ವಾಮಿಜಿ: ಮಹಾಂತ ಸ್ವಾಮೀಜಿ

ಬೆಳಗಾವಿ: ಸಮಾಜದಲ್ಲಿ ಮೂರು ತರಹದ ವ್ಯಕ್ತಿಗಳಿರುತ್ತಾರೆ. ಮತ್ತೊಬ್ಬರಿಗೆ ತೊಂದರೆ ಕೊಟ್ಟು ಬದುಕುವವರು, ಇನ್ನೊಬ್ಬರನ್ನು ತುಳಿದು ಬದುಕುವವರು ಹಾಗೂ ತುಳಿತ್ತಕ್ಕೆ ಒಳಗಾದವರನ್ನು ಮೇಲೆ ಎತ್ತುವವರು. ನಾಗನೂರು ರುದ್ರಾಕ್ಷಿ ಮಠದ ಶಿವಬಸವ ಸ್ವಾಮಿಗಳು ಜಾತಿ, ಮತ, ಪಂಥವೆನ್ನದೆ ತುಳಿತಕ್ಕೆ ಒಳಗಾದವರನ್ನು ಮೇಲೆತ್ತಿದರು. ಶರಣರಾದವರು ಶ್ರೀಗಳ ಈ ಕಾರ್ಯ ಮುಂದುವರೆಸುತ್ತ ಸಮಾಜ ಮುನ್ನಡೆಸಬೇಕೆಂದು ಮುದುಗಲ್ ಕಲ್ಯಾಣ ಆಶ್ರಮದ ಖ್ಯಾತ ಪ್ರವಚನ ಯೋಗಿ ಮಹಾಂತ ಸ್ವಾಮೀಜಿ ಅಭಿಪ್ರಾಯಪಟ್ಟರು.

ಅವರು ಇಂದು ನಗರದ ನಾಗನೂರು ರುದ್ರಾಕ್ಷಿ ಮಠದಲ್ಲಿ ಕಾಯಕಯೋಗಿ ಮಹಾಪ್ರಸಾದಿ ಡಾ. ಶಿವಬಸವ



ಮಹಾಸ್ವಾಮಿಗಳವರ 134 ನೆಯ ಜಯಂತಿ ಮಹೋತ್ಸವ ನಿಮಿತ್ಯ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು ಸತ್ಯಕ್ಕಿಂತ ದೊಡ್ಡ ತಪಸ್ಸಿಲ್ಲ, ಸುಳ್ಳಿಗಿಂತ ದೊಡ್ಡ ಪಾಪವಿಲ್ಲ. ಸತ್ಯ, ಸದಾಚಾರವಿದ್ದಲ್ಲಿ ಭಗವಂತನಿದ್ದಾನೆ ಎಂದರು.

ಸಮಾರಂಭದ ಸಮ್ಮುಖ ವಹಿಸಿದ್ದ ಶಿವಪುರ ಶಿವಲಿಂಗೇಶ್ವರ ಮಠದ ಅಭಿನವ ಶಿವಲಿಂಗ ಸ್ವಾಮಿಗಳು ಮಾತನಾಡಿ, ಭಕ್ತರಿಂದ ಕಣ್ಣೀರು ಹಾಕಿಸುವವರು ಗುರುಗಳಲ್ಲ, ಅವರ ಸಂಕಷ್ಟಗಳನ್ನು ದೂರ ಮಾಡಿ ಕಣ್ಣೀರು ಒರೆಸುವವರೇ ನಿಜವಾದ ಗುರುಗಳು. ಅಂತವರ ಸಾಲಿಗೆ ಶಿವಬಸವ ಮಹಾಸ್ವಾಮಿಗಳು ಸೇರುತ್ತಾರೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಹುಕ್ಕೇರಿ ವಿರಕ್ತಮಠದ ಶಿವಬಸವ ಸ್ವಾಮಿಜಿ ವಹಿಸಿದ್ದರು. ನೇತೃತ್ವವನ್ನು ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾ ಸ್ವಾಮೀಜಿ ವಹಿಸಿದ್ದರು. ಬೆಳಗಾವಿ ಕಾರಂಜಿ ಮಠದ ಗುರುಸಿದ್ಧ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಇದೇ ಸಂದರ್ಭದಲ್ಲಿ ಸರ್ಕಾರದಿಂದ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಮುಳುವಾಡದ ಖ್ಯಾತ ಮಕ್ಕಳ ಸಾಹಿತಿ ಪ. ಗು. ಸಿದ್ದಾಪುರ ಹಾಗೂ ಇಳಕಲ್ಲನ ಜಾನಪದ ವಿದ್ವಾಂಸ ಡಾ. ಶಂಬು ಬಳಿಗಾರ ಅವರನ್ನು ಸತ್ಕರಿಸಲಾಯಿತು. ಅದಲ್ಲದೆ ಕನ್ನಡ ನಾಡು, ನುಡಿ ಸೇವೆಗಾಗಿ ಶ್ರಮಿಸಿದ ನಿಪ್ಪಾಣಿಯ ಮಿಥುನ್ ಅಂಕಲಿ, ಅಥಣಿಯ ಚೆನ್ನಯ್ಯ ಇಟ್ನಾಳಮಠ, ಬೆಳಗಾವಿಯ ಮಹಬೂಬ್ ಮಕಾಂದರ್ ಹಾಗೂ ಸಂಕದ ಆರ್. ಜಿ. ಬಿರಾದರ್ ಅವರಿಗೆ ನಾಗನೂರು ರುದ್ರಾಕ್ಷಿ ಮಠದಿಂದ ಕೊಡಮಾಡುವ ಕನ್ನಡ ನುಡಿ ಶ್ರೀ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಪ್ರಾರಂಭದಲ್ಲಿ ಪ್ರಾಚಾರ್ಯ ಡಾ. ಎ.ಎಲ್. ಪಾಟೀಲ ಸ್ವಾಗತಿಸಿದರು ರಾಜಶೇಖರ ಪಾಟೀಲ ನಿರೂಪಿಸಿದರು. ಕೊನೆಯಲ್ಲಿ ಉಪನ್ಯಾಸಕ ಮಂಜುನಾಥ ಶರಣಪ್ಪನವರ ವಂದಿಸಿದರು.

## ಡಬ್ಬಿಂಗ್ ಮುಗಿಸಿದ "ತುಷಾರ್"



ಬೆಂಗಳೂರ: ಅಪರಾಧಕ್ಕೆ ಸವಾಲು ದಿನಪತ್ರಿಕೆ ಸಹಯೋಗ ದಲ್ಲಿ ಮಲಗೊಂಡ ಫಿಲಂ ಪ್ರೊಡಕ್ಷನ್ ಬ್ಯಾನರಡಿಯಲ್ಲಿ ನಿರ್ಮಾಣವಾಗುತ್ತಿರುವ 'ತುಷಾರ' ಚಲನಚಿತ್ರದ ಡಬ್ಬಿಂಗ್ ಕಾರ್ಯ ಮುಕ್ತಾಯವಾಯಿತು.

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸಂಗೀತ ನಿರ್ದೇಶಕ ಮಂಜು ಕವಿ ಅವರ ಎಮ್ ಕೆ ಸ್ಟುಡಿಯೋದಲ್ಲಿ ಸತತವಾಗಿ ಒಂದು ವಾರಗಳ ಕಾಲ "ತುಷಾರ್" ಚಿತ್ರದ ಡಬ್ಬಿಂಗ್ ಕಾರ್ಯಗಳನ್ನು ನಡೆಸಲಾಗಿದೆ. 'ತುಷಾರ್' ಸಿನಿಮಾಕ್ಕೆ ವಿಶ್ವಪ್ರಕಾಶ ಮಲಗೊಂಡ ನಟನೆಯ ಜೊತೆಗೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ.

ಅಲ್ಲದೆ ಈ ಚಿತ್ರದ ಮೂಲಕ ಯುವ ಪ್ರತಿಭಾನ್ವಿತ ಕಲಾವಿದೆ ಶಿಲ್ಪಾ ಮೂರ್ತಿ ನಾಯಕಿಯಾಗಿ ಚಿತ್ರರಂಗಕ್ಕೆ ಪರಿಚಯವಾಗುತ್ತಿದ್ದಾರೆ.

ರವಿ ಕುಂಟೋಜಿ ಛಾಯಾಗ್ರಹಣ, ಮಂಜುಕವಿ ಸಂಗೀತ , ಸಾಹಿತ್ಯ ಸಂಭಾಷಣೆ ಪವನ್ ಕುಮಾರ್ ಬೂದಿಹಾಳ, ಚಂದು ಸಂಕಲನ, ಉಮೇಶ್.ಕೆ.ಎನ್ ಪಬ್ಲಿಸಿಟಿ ಡಿಸೈನ್, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಗಿ, ಹರೀಶ್ ಅರಸು. ಪೋಸ್ಟರ್ ಡಿಸೈನ್ ವಿಶ್ವ ಬಿರಾದಾರ, ಪ್ರಸಾದ್ ತೋಟದ, ಸಹ ನಿರ್ದೇಶಕರಾಗಿ ಸುಧಾ ಅಣ್ಣಾಶೇತ, ತಂಡದಲ್ಲಿ ಪೃಥ್ವಿರಾಜ್ ನಾಯಕ, ಸಿದ್ದು ತಳ್ಳೊಳ್ಳಿ, ಚಂದ್ರಕಾಂತ ಬೂದಿಹಾಳ, ಶ್ರೇಯಶ್ ದೇಶಪಾಂಡೆ ಇದ್ದಾರೆ.

'ಅಪರಾಧಕ್ಕೆ ಸವಾಲು' ಕನ್ನಡ ದಿನಪತ್ರಿಕೆ ಸಹಯೋಗದಲ್ಲಿ ಮಲಗೊಂಡ ಫಿಲಂ ಪ್ರೊಡಕ್ಷನ್ ನಿರ್ಮಾಣ ಮಾಡಿದ್ದಾರೆ.

## ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಫಲ ಪುಷ್ಪ ಪ್ರದರ್ಶನ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗ್ರಾಮೀಣ ಮತ್ತು ಸಣ್ಣ ಉದ್ಯಮ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಬೆಳಗಾವಿ ರವರ ಸಂಯುಕ್ತ ಆಶ್ರಯದಲ್ಲಿ 2023–24 ನೇ ಸಾಲಿನ ಕೈಗಾರಿಕಾ ವಸ್ತು ಪ್ರದರ್ಶನವನ್ನು ಡಿ.08 ರಿಂದ ಡಿ.10 2023 ರ ವರೆಗೆ ನಗರದ ಹ್ಯೂಮ್ ಪಾರ್ಕ, ಕ್ಲಬ್ ರೋಡ ಇಲ್ಲಿ ವಿಜೃಂಭಣೆಯಿಂದ ಆಯೋಜನೆ ಮಾಡಲಾಗಿದೆ. ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮೆ ಸಚಿವರಾದ ಶರಣಬಸಪ್ಪ ದರ್ಶನಾಪೂರ ಅವರು ಕೈಗಾರಿಕಾ ವಸ್ತು ಪ್ರದರ್ಶನ ಉದ್ಘಾಟಿಸಲಿದ್ದಾರೆ. ತೋಟಗಾರಿಕೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಅವರು ಫಲ–ಪುಷ್ಪ ಪ್ರದರ್ಶನದ ಉದ್ಘಾಟಿಸಲಿದ್ದಾರೆ. ಲೋಕೋಪಯೋಗಿ ಸಚಿವರಾದ ಸತೀಶ ಲ. ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲಿಕರಣ ಸಚಿವರಾದ ಲಕ್ಷ್ಮೀ ಆರ್. ಹೆಬ್ಬಾಳಕರ ಅವರು ಘಣ ಉಪಸಿತರಿರಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕೈಗಾರಿಕಾ ವಸ್ತು ಪ್ರದರ್ಶನದಲ್ಲಿ ಜಿಲ್ಲೆಯಲ್ಲಿ ತಯಾರಿಸಲಾಗುವ ಗೃಹ ಕೈಗಾರಿಕೆ ಹಾಗೂ ಕರಕುಶಲ ವಸ್ತುಗಳು, ಕೈಮಗ್ಗದ ವಸ್ತ್ರಗಳು, ಖಾದಿ ಗ್ರಾಮೋದ್ಯೋಗ ಮತ್ತು ಇನ್ನಿತರ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮೇಳ ಮತ್ತು ಫಲ–ಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ, ಮಕ್ಕಳಿಗೆ ಗ್ರಾಮೀಣ ಕ್ರೀಡೆ ಹಾಗೂ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ವೀಕ್ಷಿಸಲು ಉಚಿತ ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಸದರಿ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಮಳಿಗೆಗಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವವರು ಮೋಬೈಲ ಸಂಖ್ಯೆ 9448989942/9448866919 ಗೆ ಸಂರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಉಪ ನಿರ್ದೇಶಕರು (ಖಾಗ್ರಾ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಸ್ಯ ಕವನ/ ಹಾಸ್ಯ ಹನಿಗವನ ಗೋಷ್ಠಿ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 9. ಶನಿವಾರ ಸಾಯಂಕಾಲ. 4–30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಹಾಸ್ಯ ಕವನ/ ಹಾಸ್ಯ ಹನಿಗವನ ಗೋಷ್ಠಿ" ಯನ್ನು ಹಮ್ಮಿಕೊಳ್ಳಲಾಗಿದೆ. ಈ "ಹಾಸ್ಯ ಕವನ/ ಹನಿಗವನ ಗೋಷ್ಠಿ" ಯಲ್ಲಿ ಯಾರೂ ಭಾಗವಹಿಸಬಹುದಾಗಿದ್ದು 5 ನಿಮಿಷ ಕಾಲಾವಕಾಶವಿರುತ್ತದೆ. ಕವನ ಅಥವಾ ಅಥವಾ ಹನಿಗವನ ಜನರನ್ನ ರಂಜಿಸಬೇಕು. ಆಸಕ್ತ ಕವಿಗಳು 9448093589 ವಾಟ್ಸಾಪ್ ನಂಬರಗೆ ತಮ್ಮ ಹೆಸರನ್ನು ಕಳುಹಿಸಬೇಕು.

## ಲೇಖನ ಆಹ್ವಾನ

ಬೆಳಗಾವಿ: ರಾಜ್ಯವು 'ಕರ್ನಾಟಕ' ಎಂದು ಮರುನಾಮಕರಣಗೊಂಡು ಐವತ್ತು ವರ್ಷ ತುಂಬಿರುವ ಈ ಶುಭ ಗಳಿಗೆಯ ಸವಿ ನೆನಪಿಗಾಗಿ ಕರ್ನಾಟಕದ ಸರ್ವಾಂಗೀನ ಅಭಿವೃದ್ಧಿಯ ಜೊತೆಗೆ ಕರ್ನಾಟಕ ಏಕೀಕರಣಕ್ಕೆ ದುಡಿದ ಮಹನೀಯರು ಮತ್ತು ಸಂಘ–ಸಂಸ್ಥೆಗಳ ಪರಿಚಯಾತ್ಮಕ ಸಂವಾದಿತ ಕೃತಿಯನ್ನು ಪ್ರಕಾಶಿಸಲು ಯೋಜನೆ ಹಾಕಿಕೊಳ್ಳಲಾಗಿದೆ.

ಆಸಕ್ತ ಲೇಖಕರು ಕರ್ನಾಟಕ ಸುವರ್ಣ ಸಂಭ್ರಮಕ್ಕೆ ಪೂರಕವಾಗಿರುವ ಹಾಗೂ ಕನ್ನಡ ನಾಡು–ನುಡಿಗೆ ದುಡಿದ ಮಹನೀಯರು/ಸಂಘ–ಸಂಸ್ಥೆಗಳನ್ನು ಆಯ್ಕೆ ಮಾಡಿಕೊಂಡು 5–8 ಪುಟಕ್ಕೆ ಸೀಮಿತ ಲೇಖನ ರಚಿಸಿ, ಸ.ರಾ. ಸುಳಕೂಡೆ # 1319, ಶ್ರೀ ಶಿವಪ್ರಸಾದ ರಾಮತೀರ್ಥನಗರ ಬೆಳಗಾವಿ–590015 ವಿಳಾಸಕ್ಕೆ 25–12–2023 ಗೆ ಒಳಗಾಗಿ ಕಳುಹಿಸಲು ಕೋರಿದೆ. ಈ ಕೃತಿಯಲ್ಲಿ ಆಯ್ದ ಉತ್ತಮ 50 ಲೇಖನಗಳನ್ನು ಮಾತ್ರ ಪ್ರಕಟಿಸುವ ಅವಕಾಶವಿರುವದನ್ನು ಲೇಖಕರು ಗಮನಿಸಬೇಕಾಗಿ ವಿನಂತಿ.

# ವಿಶ್ವ ಏಡ್ಸ್ ದಿನದ ಪ್ರಯುಕ್ತ ವಿಶೇಷ ಉಪನ್ಯಾಸ



ಬೆಳಗಾವಿ: ನಗರದ ಪ್ರತಿಷ್ಠಿತ ಕೆ.ಎಲ್.ಇ. ಸಂಸ್ಥೆಯ ರಾಜಾ ಲಖಮಗೌಡ ವಿಜ್ಞಾನ (ಸ್ವಾಯತ್ತ) ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗ ಹಾಗೂ ಎನ್‌ಎಸ್‌ಎಸ್ ಮತ್ತು ರೆಡ್ ರಿಬ್ಬನ್ ಕ್ಲಬ್ ಸಹಯೋಗದೊಂದಿಗೆ ವಿಶ್ವ ಏಡ್ಸ್ ದಿನದ ಪ್ರಯುಕ್ತ ವಿಶೇಷ ಉಪನ್ಯಾಸವನ್ನು ಸರ್. ಸಿ.ವಿ. ರಾಮನ್ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಶ್ರಯ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷರಾದ ಶ್ರೀಮತಿ. ನಾಗರತ್ನಾ ಎಸ್ ರಾಮಗೌಡ ಅವರು ಆಗಮಿಸಿ ಮಾತನಾಡುತ್ತ ಎಚ್‌ಐವಿ ಏಡ್ಸ್ ಕಾಯಿಲೆಗೆ ಕಾರಣಗಳು ಮತ್ತು ಪರಿಹಾರಗಳ ಕುರಿತು ವಿವರಿಸಿದರು. ತಮ್ಮ ಜೀವನದ ನಿದರ್ಶನವನ್ನು ನೀಡುವ ಮೂಲಕ ವಿದ್ಯಾರ್ಥಿಗಳು ತಮ್ಮ ಮತ್ತು ತಮ್ಮ ಕುಟುಂಬದವರಿಗೆ ಸೋಂಕು ಹರಡದಂತೆ ಮುಂಜಾಗ್ರತೆ ವಹಿಸುವಂತೆ ಎಚ್ಚರಿಸಿದರು. ಆಶ್ರಯ ಫೌಂಡೇಶನ್‌ನಲ್ಲಿ ಇರುವ ಮಕ್ಕಳ ಜೀವನೋತ್ಸಾಹದ ಕುರಿತು ವಿವರಿಸಿದರು.

ಪ್ರಾಚಾರ್ಯರಾದ ಡಾ. ಜ್ಯೋತಿ ಎಸ್. ಕವಳೇಕರ ಅವರು ಅಧ್ಯಕ್ಷೀಯ ನುಡಿಗಳನ್ನಾಡಿದರು. ಕು. ಸಂಯುಕ್ತಾ ಪ್ರಾರ್ಥನೆ ಹಾಡಿದರು. ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಮಿಸ್. ಆರ್. ಎಸ್. ಮಾಬೆನ್ ಅವರು ಸ್ವಾಗತಿಸಿದರು.

ಮಿಸ್. ವೈಷ್ಣವಿ ಕುಡತರಕರ ಅವರು ಅತಿಥಿಗಳನ್ನು ಪರಿಚಯಿಸಿದರು. ಮತ್ತು ಎನ್‌ಎಸ್‌ಎಸ್ ಅಧಿಕಾರಿಗಳಾದ ಶ್ರೀಮತಿ. ಮಹಾದೇವಿ ಸಿ. ಹುಣಶೀಬೀಜ ಅವರು ವಂದಿಸಿದರು. ಕು. ಜಾಹ್ನವಿ ಮತ್ತು ವೈಷ್ಣವಿ ಕಾರ್ಯಕ್ರಮ ನಿರೂಪಣೆ ಮಾಡಿದರು.

100 ಕ್ಕೂ ಅಧಿಕ ವಿದ್ಯಾರ್ಥಿಗಳು ಮತ್ತು ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಐಟಿಐಯ ತರಬೇತಿದಾರರಿಗೆ ವೇತನಾನುದಾನ ಮರುಜಾರಿ ಮಾಡುವಂತೆ ಆಗ್ರಹ

ಬೆಳಗಾವಿ: ಐಟಿಐಯ ತರಬೇತಿದಾರರಿಗೆ ವೇತನಾನುದಾನ ಮರುಜಾರಿ ಮಾಡುವಂತೆ ಕರ್ನಾಟಕ ರಾಜ್ಯ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಂಘಟನೆಯಿಂದ ಸುವರ್ಣ ಸೌಧದ ಬಳಿ ಬೃಹತ್ ಧರಣಿ ಸತ್ಯಾಗ್ರಹ ನಡೆಸಿ, ಸರ್ಕಾರಕ್ಕೆ ಆಗ್ರಹಿಸಿದರು.

ವೇತನಾನುದಾನದಲ್ಲಿ ಖಾಸಗಿ ಐಟಿಐಗಳಲ್ಲಿ ಕಳೆದ 15–20ವರ್ಷಗಳಿಂದ ಕಾರ್ಯ ನಿರ್ವಹಿಸಿದ ತಾಂತ್ರಿಕ ಹಾಗೂ ತಾಂತ್ರಿಕೇತರ ಸಿಬ್ಬಂದಿ ಪರಿಸ್ಥಿತಿಯು ಅತಂತ್ರವಾಗಿದೆ. ಕುಟುಂಬದ ನಿರ್ವವಣೆ ಕಷ್ಟಕರವಾಗಿದೆ, ಸರ್ಕಾರಗಳು ಸಿಬ್ಬಂದಿಗಳ ವೇತನ ಬಗ್ಗೆ ಕಾಳಜಿ ವಹಿಸಿ, ಸರ್ಕಾರದಿಂದ ನ್ಯಾಯ ಒದಗಿಸಿ ಕೊಡಬೇಕೆಂದು ಮನವಿ ತಿಳಿದರು.

ಸರ್ಕಾರ ಮೀನಾ ಮೇಷ ಸರಿಯಲ್ಲ ಈಗಾಗಲೇ ಖಾಸಗಿ ಐಟಿಐಗಳ ವೇತನಾನುದಾನಕ್ಕೆ 2014 ಮತ್ತು 2018ರಲ್ಲಿ 2ಬಾರಿ ಪೂರ್ವಭಾವಿ ಪರೀವೀಕ್ಷಣೆ ಕೈಗೊಂಡಿದ್ದರೂ ವೇತನಾನುದಾನ ಕೊಡಲು ಸರ್ಕಾರ ಮೀನಾ ಮೇಷ ಎಣಿಸುತ್ತಿದೆಷಿದು ಸರಿಯಲ್ಲ. ಇದು ಖಂಡನೀಯವಾಗಿದೆ. ಏಕೆಂದರೆ, ಹೆಚ್ಚಾಗಿ ಬಡವರ್ಗದವರ



ಮಕ್ಕಳೇ ಐಟಿಐ ತರಬೇತಿಗೆ ಬರುತ್ತಾರೆ. ಇವರಿಂದ ಬರುವಂಥ ಶುಲ್ಕಗಳಿಂದ ಸರ್ಕಾರ ನಿಗದಿಪಡಿಸಿದ ಗೌರವಧನವನ್ನು ಐಟಿಐ ಸಿಬ್ಬಂದಿಗೆ ಕೊಡುವುದು ಆಗುವುದಿಲ್ಲ.

ಸರ್ಕಾರದ ಸಹಾಯಾನುದಾನದ ಬೇಕೇ ಬೇಕಾಗುತ್ತದೆ. ಇದನ್ನು ಮನಗಂಡು 1997ರಲ್ಲಿ ಆಗಿನ ಸರ್ಕಾರ ವೇತನಾನುದಾನ ಸಂಹಿತೆ ಜಾರಿಗೆ ತಂದಿತು.

ಅದರಂತೆ 7ವರ್ಷ ಪೂರೈಸಿದ ರಾಜ್ಯದ 192 ಐಟಿಐಗಳಿಗೆ ವೇತನ ಅನುದಾನ ಕೊಡಲಾಗಿದೆ.

2010ರಲ್ಲಿ ಅಂದಿನ ಸರ್ಕಾರ ವೇತನಾನುದಾನ ಸಂಹಿತೆ ಹಿಂಪಡೆದು ವಿದ್ಯಾರ್ಥಿ ಕೇಂದ್ರಿತ ಅನುದಾನಕ್ಕೆ ಆದೇಶಿಸಿ ಖಾಸಗಿ ಐಟಿಐ ಸಂಸ್ಥೆಗಳಿಗೆ ಅನ್ಯಾಯ ಮಾಡಿದೆ ಸರ್ಕಾರ ಐಟಿಐ ವೇತನ ಬಗ್ಗೆ ಪರಿಷ್ಕರಣೆ ಮಾಡಿ ನ್ಯಾಯ ಒದಗಿಸಿಕೊಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿಕೊಂಡರು.

ಆದರೆ, ಈ ಅನುದಾನದಲ್ಲಿ ಶ್ರೇಣಿಕೃತ ವೇತನ, ಸೇವಾಭದ್ರತೆ ಇಲ್ಲದೇ ಇರುವುದರಿಂದ ರಾಜ್ಯದ ಎಲ್ಲ ಖಾಸಗಿ ಐಟಿಐಗಳು ಆ ಆದೇಶವನ್ನು ತಿರಸ್ಕರಿಸಿವೆ.

ಸರ್ಕಾರ ಇನ್ನಾದರೂ ವಿದ್ಯಾರ್ಥಿ ಕೇಂದ್ರಿತ ಅನುದಾನ ಸಂಹಿತೆ ರದ್ದುಪಡಿಸಿ ಈ ಹಿಂದಿನ ವೇತನಾನುದಾನ ಸಂಹಿತೆಯನ್ನು ಮರು ಜಾರಿಗೊಳಿಸಬೇಕೆಂಬುದು ಆಗ್ರಹಿಸಿದರು.

## ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆ

ಬೆಳಗಾವಿ: ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಹಾಗೂ ಜಯಭಾರತ ಫೌಂಡೇಶನ ಇವರ ಸಹಯೋಗದಲ್ಲಿ ರವಿವಾರ ದಿನಾಂಕ 17 ರಂದು ಮುಂಜಾನೆ 10.00 ಗಂಟೆಗೆ ಉತ್ತಮ ಆರೋಗ್ಯಕ್ಕಾಗಿ ಯೊಗಾಸನಗಳು ವಿಷಯದ ಕುರಿತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಬೆಳಗಾವಿಯ ಆಂಜನೇಯ ನಗರದಲ್ಲಿರುವ ಗ್ಲಾಸ್ ಹೌಸ್‌ನಲ್ಲಿ ಆಯೋಜಿಸಲಾಗಿದೆ.

ಸ್ಪರ್ಧೆಯಲ್ಲಿ ವಿಜೇತರಾದ ಮೂರು ವಿದ್ಯಾರ್ಥಿಗಳಿಗೆ ಪಾರೀತೋಷಕ ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುವುದು. ಚಿತ್ರಕಲೆ ಬಿಡಿಸಲು 2 ಘಂಟೆಗಳ ಕಾಲಾವಕಾಶ ಇರುತ್ತದೆ.

ಭಾಗವಹಿಸಿದ ಪ್ರತಿಯೊಬ್ಬರಿಗೂ ಪ್ರಮಾಣ ಪತ್ರವನ್ನು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಾಗೂ ಹೆಸರು ನೋಂದಾಯಿಸಲು 9880149513 ಸಂಪರ್ಕಿಸಲು ಕೋರಲಾಗಿದೆ.

ಸಂಪುಟ: 4 ಸಂಚಿಕೆ: 258 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089